# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 86 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 11–10–2023 ಬುಧವಾರ | ಪುಟ: 4 | ಬೆಲೆ : ರೂ.2–00

Volume - 01 Issue - 86 | Title- Code: KARKAN 28269 | Chitradurga | Date: 11-10-2023 Wednesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸಿದ್ದಾಪುರ ಬೈಪಾಸ್ ಕಾಮಗಾರಿ ವೀಕ್ಷಿಸಿದ ಶಾಸಕ ಟಿ.ರಘುಮೂರ್ತಿ 2

ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರಲು ಸಿದ್ಧರಾಗಿ: ಕಾರ್ಯಕರ್ತರಿಗೆ ಸಚಿವ ಕೃಷ್ಣ ಭೈರೇಗೌಡ ಕರೆ 3

ಬಗರ್ ಹುಕುಂ: 41580 ಅರ್ಜಿ ವರ್ಷದೊಳಗೆ ವಿಲೇವಾರಿ ಮಾಡಿ 4


ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಅ.14ರಂದು ರಾಜ್ಯ ಮಟ್ಟದ ಸೈಕ್ಲಿಂಗ್ ಸ್ಪರ್ಧೆ

» **ದಾವಣಗೆರೆ**

ದಸರಾ ಸಿ.ಎಂ.ಕಪ್ ಕ್ರೀಡಾಕೂಟ2023ರ ಅಂಗವಾಗಿ ರಾಜ್ಯ ಮಟ್ಟದ ಸೈಕ್ಲಿಂಗ್ ಸ್ಪರ್ಧೆಯನ್ನು ಅಕ್ಟೋಬರ್.14 ರಂದು ಮೈಸೂರಿನಲ್ಲಿ ಏರ್ಪಡಿಸಲಾಗಿದೆ. ದಾವಣಗೆರೆ ಜಿಲ್ಲೆಯಿಂದ ಸೈಕ್ಲಿಂಗ್ ಸ್ಪರ್ಧೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳು ತಮ್ಮ ಹೆಸರನ್ನು ಅಕ್ಟೋಬರ್. 12ರ ಸಂಜೆ 3 ಗಂಟೆಯ ಒಳಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗಾಗಿ ಶ್ರೀಮತಿ ಅಲ್ಕಾ ಪಡತಾರೆ. ದೂ.9448234883, ಅನಿತಾ ನಿಂಬರಗಿ ದೂ.9449959064ಗೆ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಜಯಲಕ್ಷ್ಮೀ ಬಾಯಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀಮಹರ್ಷಿ ವಾಲ್ಮೀಕಿ ಜಯಂತಿ ಪೂರ್ವಸಭೆ

» **ದಾವಣಗೆರೆ**

ಪ್ರಸಕ್ತ ಸಾಲಿನ ಶ್ರೀಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅ.12 ರಂದು ಮಧ್ಯಾಹ್ನ 3 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಸಭಾಂಗಣ. ಮೊದಲನೆ ಮಹಡಿ, ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬೇಬಿ ಸುನೀತಾ ತಿಳಿಸಿದ್ದಾರೆ.

# ಸಾರ್ವಜನಿಕರ ಶೀಘ್ರ ಸೇವೆಗೆ ಇ–ಆಫೀಸ್ ಜಾರಿ: ಕಂದಾಯ ಸಚಿವ ಕೃಷ್ಣಭೈರೇಗೌಡ

» **ಹೊಸದುರ್ಗ**

ಕಂದಾಯ ಇಲಾಖೆಯಲ್ಲಿನ ಕಚೇರಿಗಳಲ್ಲಿ ಸಾರ್ವಜನಿಕರಿಗೆ ಅತಿ ಜರೂರಾಗಿ ಕೆಲಸ ಮಾಡಿ ಕೊಡುವ ಉದ್ದೇಶದಿಂದ ಇ–ಆಫೀಸ್ ನ್ನು ಸೋಮವಾರದಿಂದ ಜಾರಿಗೊಳಿಸಿದ್ದು, ಇದು ವಿಸ್ತರಣೆಗೊಳ್ಳಬೇಕಿದೆ. ಇದನ್ನು ಸಮರ್ಪಕವಾಗಿ ನಿರ್ವಹಿಸಿದರೆ, ಕಡತಗಳ ವಿಲೇವಾರಿ ಸಮಯಕ್ಕೆ ಸರಿಯಾಗಿ ಆಗುತ್ತದೆ. ಸಾರ್ವಜನಿಕರು ಕೆಲಸ ಬಿಟ್ಟು ತಿಂಗಳುಗಟ್ಟಲೆ ಕಚೇರಿಗೆ ಅಲೆದಾಡುವುದು ತಪ್ಪುತ್ತದೆ ಎಂದು ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿಗೆ ಮಂಗಳವಾರ ಕಂದಾಯ ಇಲಾಖೆ ಸಚಿವ ಕೃಷ್ಣ ಭೈರೇಗೌಡ ದಿಡೀರ್ ಭೇಟಿ ನೀಡಿ, ಇಲಾಖೆಯನ್ನು ಪರಿಶೀಲಿಸಿ ಸಿಬ್ಬಂದಿಗಳೊಂದಿಗೆ ಹಲವು ವಿಷಯಗಳ ಬಗ್ಗೆ ಚರ್ಚಿಸಿ, ನಂತರ ಅವರು ಮಾತನಾಡಿದರು.ಗಣಕಯಂತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಿಬ್ಬಂದಿಗಳ ಬಳಿ ಬಂದು ಕಾರ್ಯವೈಖರಿ ಹಾಗೂ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು. ಇಲ್ಲಿನ ಸಿಬ್ಬಂದಿಗಳು ಒಂದೊಂದು ವಿಭಾಗಕ್ಕೂ ಕಂಪ್ಯೂಟರ್ ಗಳಿವೆ, ಸರ್ವರ್ ಸಮಸ್ಯೆ ಹೊರತುಪಡಿಸಿ ಬೇರೆ ಯಾವ ಸಮಸ್ಯೆಗಳು ಇಲ್ಲವೆಂದು ಸಚಿವರಿ ಮಾಹಿತಿ ನೀಡಿದರು. ನಂತರ ಟಪಾಲು ವಿಭಾಗಕ್ಕೆ ಭೇಟಿ ನೀಡಿದ ಸಚಿವರು, ಅಲ್ಲಿನ ಸಿಬ್ಬಂದಿಗೆ ದಿನಕ್ಕೆ ಅರ್ಜಿಗಳ ಸ್ವೀಕಾರ ಎಷ್ಟಿರುತ್ತದೆ, ಕಂಪ್ಯೂಟರ್ ಇಲ್ಲದೆ ನಿಮ್ಮ ಕಾರ್ಯ ಹೇಗೆ? ಎಂದು ಪ್ರಶ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಿಬ್ಬಂದಿ ದಿನಕ್ಕೆ ಸುಮಾರು 100–150 ಅರ್ಜಿಗಳ ಸ್ವೀಕಾರ ಆಗುತ್ತದೆ. ಈ ಕೆಲಸಕ್ಕೆ ಬಂದಾಗಿನಿಂದಲೂ ಇಲ್ಲಿ ಕಂಪ್ಯೂಟರ್ ಕಲ್ಪಿಸಿಲ್ಲ. ಪಕ್ಕದ ಕೊಠಡಿಯಲ್ಲಿನ ಕಂಪ್ಯೂಟರ್ ಬಳಸಿ, ಅರ್ಜಿಗಳನ್ನು ದಾಖಲು ಮಾಡುತ್ತೇನೆ. ಒಬ್ಬರೆ ಸಿಬ್ಬಂದಿ ಇರುವುದರಿಂದ ದಿನಕ್ಕೆ 50 ಅರ್ಜಿಗಳ ದಾಖಲು ಮಾತ್ರ ಮಾಡಲಾಗುತ್ತದೆ ಎಂದರು.

**ರೆಕಾರ್ಡ್ಸ್ ರೂಂ ಪರಿಶೀಲನೆ::** ಸಚಿವರು ರೆಕಾರ್ಡ್ ರೂಂ ಗೆ ಭೇಟಿ ನೀಡಿ ಅಲ್ಲಿ ಕಟ್ಟಿ ಹಾಕಿದ್ದ ದಾಖಲೆಗಳನ್ನು ಕಂಡು ಬೇಸರ ವ್ಯಕ್ತಪಡಿಸಿದರು. ಈ ದಾಖಲೆಗಳನ್ನೆಲ್ಲಾ ಬಹಳ ವರ್ಷಗಳಿಂದ ಬಿಚ್ಚಿಲ್ಲ ಅನ್ನಿಸುತ್ತೆ. ಸಾರ್ವಜನಿಕರು ಹಳೇ ದಾಖಲೆಗಳನ್ನು ಕೇಳಿದರೆ ನೀವು ನೀಡುವುದು ಅನುಮಾನವಾಗಿದೆ. ದಾಖಲೆಗಳನ್ನು ಸುರಕ್ಷಿತವಾಗಿ, ಕ್ರಮ ಬದ್ಧವಾಗಿಡಿ ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಟಪಾಲು ವಿಭಾಗಕ್ಕೆ ಅರ್ಜಿ ಸ್ವೀಕರಿಸಲು ಸಿಬ್ಬಂದಿಯನ್ನು ನೇಮಕ, ಕಂಪ್ಯೂಟರ್ ವ್ಯವಸ್ಥೆ ಶೀಘ್ರದಲ್ಲೇ ಆಗಬೇಕು. ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಟಪಾಲು ಸ್ವೀಕರಿಸುವ ಕಾರ್ಯವೇ ಇಲಾಖೆಯ ಅತ್ಯಂತ ಮುಖ್ಯ ಕೆಲಸ ಎಂದು ತಹಶೀಲ್ದಾರ್ ಗೆ ಸೂಚಿಸಿದರು.

ಈ ವೇಳೆ ಜಿಲ್ಲಾಧಿಕಾರಿ ದಿವ್ಯಾ ಪ್ರಭು, ಶಾಸಕ ಬಿ.ಜಿ.ಗೋವಿಂದಪ್ಪ, ತಹಶೀಲ್ದಾರ್ ತಿರುಪತಿ ಪಾಟೀಲ್ ಮತ್ತು ಕೃಷಿ ಅಧಿಕಾರಿ ಸಿ.ಎಸ್.ಈಶ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಸಾರ್ವಜನಿಕರಿದ್ದರು. ಹಲವರಿದ್ದರು.



> ಟಪಾಲು ವಿಭಾಗಕ್ಕೆ ಅರ್ಜಿ ಸ್ವೀಕರಿಸಲು ಸಿಬ್ಬಂದಿಯನ್ನು ನೇಮಕ, ಕಂಪ್ಯೂಟರ್ ವ್ಯವಸ್ಥೆ ಶೀಘ್ರದಲ್ಲೇ ಆಗಬೇಕು. ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಟಪಾಲು ಸ್ವೀಕರಿಸುವ ಕಾರ್ಯವೇ ಇಲಾಖೆಯ ಅತ್ಯಂತ ಮುಖ್ಯ ಕೆಲಸ ಎಂದು ತಹಶೀಲ್ದಾರ್‌ಗೆ ಸೂಚಿಸಿದರು.

# ಟಮೋಟೊ ಬೆಳೆಗಾರನ ಸ್ಥಿತಿ ಅಧೋಗತಿ

## ಮಾರುಕಟ್ಟೆಯಲ್ಲಿ ದರದ ತಾರತಮ್ಯ: ಬೇಸರಗೊಂಡ ರೈತ ನೆಲಕ್ಕೆ ಹಣ್ಣು ಸುರಿದು ಆಕ್ರೋಶ

» **ಚಳ್ಳಕೆರೆ**

ಕಡಿಮೆ ದರಕ್ಕೆ ಟಮೋಟೊ ಹಣ್ಣು ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸಾಧ್ಯವಾಗದೆ ರಸ್ತೆಗೆ ಸುರಿದು ಮನೆಗೆ ಹೋದ ರೈತ. ಇತ್ತೀಚಿನ ದಿನಗಳಲ್ಲಿ ಗಗನ್ನೇರಿದ ಟಮೋಟೊ ಬೆಲೆ ಈಗ ಕೇವಲ ಎರಡಂಕಿ ಬೆಲೆಗೆ ದೊರೆಯುತ್ತಿದ್ದ ಇದರಿಂದ ಟಮೋಟೊ ಬೆಳೆಗಾರರು ಕಂಗಾಲಾಗಿದ್ದಾರೆ. ಕಳೆದ ತಿಂಗಳಗಷ್ಟೇ ಒಂದು ಬಾಕ್ಸ್ ಟಮೋಟೊ ಹಣ್ಣಿನ ಬೆಲೆ ಎರಡು ಸಾವಿರ ದಾಟಿದ್ದು, ಈಗ ಕೇವಲ ಒಂದು ಬಾಕ್ಸ್‌ಗೆ 20ರಿಂದ30ರೂಗೆ ಮಾರಾಟವಾಗುತ್ತಿವೆ.

ಪುಟ ↘ 2



**ಪ್ರಮುಖ ಸುದ್ದಿ**

# ದುಶ್ಚಟ ಮುಕ್ತ ಸಮಾಜ ನಿರ್ಮಾಣ: ಜನಜಾಗೃತಿ ಜಾಥಕ್ಕೆ ಚಂದ್ರಪ್ಪ ಚಾಲನೆ

» **ಹೊಳಲ್ಕೆರೆ**

ಗ್ರಾಮೀಣ ಭಾಗದ ಮಹಿಳೆಯರು ಸ್ವಾವಲಂಭಿಯಾಗಿ ಬದುಕು ಕಟ್ಟಿಕೊಳ್ಳಲು ಕಳೆದ ನಲವತ್ತು ವರ್ಷಗಳಿಂದಲೂ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರು ಅತ್ಯುತ್ತಮ ಕೆಲಸ ಮಾಡಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಗುಣಗಾನ ಮಾಡಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್. ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ, ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಪ್ರಗತಿ ಬಂಧು ಸ್ವ–ಸಹಾಯ ಸಂಘಗಳ ಒಕ್ಕೂಟ ಇವರುಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಪ್ರಸನ್ನ ಗಣಪತಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ಗಾಂಧಿ ಜಯಂತಿ ಸಂಭ್ರಮಾಚರಣೆ, ದುಶ್ಚಟ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಜನಜಾಗೃತಿ ಜಾಥಾ ಮತ್ತು ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಅರವತ್ತುಲಕ್ಷಕ್ಕೂಹೆಚ್ಚುಮಹಿಳೆಯರುಸ್ವ–ಸಹಾಯ ಸಂಘದಲ್ಲಿ ಸದಸ್ಯರುಗಳಾಗಿದ್ದು, ಎಲ್ಲರ ಬದುಕಿಗೂ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆ ಹಾಗೂ ಶ್ರೀಮತಿ ಹೇಮಾವತಿ ಹೆಗಡೆ ಇವರುಗಳು ಶ್ರಮಿಸುತ್ತಿದ್ದಾರೆ. ಲಕ್ಷಾಂತರ ನಿರುದ್ಯೋಗಿ ಯುವಕರಿಗೂ ರುಡ್‌ಸೆಟ್



ಮೂಲಕ ತರಬೇತಿಯನ್ನು ಕೊಡಲಾಗುತ್ತಿದೆ. ಸಮಾಜಕ್ಕೆ ಉಪಯುಕ್ತವಾದ ಕಾರ್ಯದಲ್ಲಿ ತೊಡಗಿರುವ ಡಾ.ಡಿ.ವೀರೇಂದ್ರ ಹೆಗಡೆರವರ ಸಮಾಜಮುಖಿ ಕೆಲಸವನ್ನು ಗುರುತಿಸಿ ದೇಶದ ಪ್ರಧಾನಿ ನರೇಂದ್ರಮೋದಿ ರಾಜ್ಯಸಭೆ ಸದಸ್ಯರನ್ನಾಗಿ ನೇಮಕ ಮಾಡಿಕೊಂಡಿದ್ದಾರೆಂದು ಹೇಳಿದರು.

ಮನುಷ್ಯನಾಗಿ ಹುಟ್ಟಿದ ಮೇಲೆ ಯಾವುದಾದರೂ ಒಂದು ಒಳ್ಳೆಯ ಕೆಲಸ ಮಾಡಿ ಸಮಾಜದ ಋಣ ತೀರಿಸಬೇಕು. ಹೊಳಲ್ಕೆರೆ ತಾಲ್ಲೂಕಿನಲ್ಲಿ 35 ಸಾವಿರ ಮಹಿಳೆಯರು ಸ್ವ–ಸಹಾಯ ಸಂಘದಲ್ಲಿ ಸದಸ್ಯರಾಗಿದ್ದಾರೆ. ಮಹಿಳೆಯರು ಒಂದೆಡೆ ಕುಳಿತು ಚರ್ಚಿಸಲು ಪಟ್ಟಣದಲ್ಲಿ ಯೋಗ್ಯವಾದ ಸ್ಥಳ ನೀಡಿದ್ದೇನೆ. ಅದಕ್ಕೆ ಡಾ.ಡಿ.ವೀರೇಂದ್ರ ಹೆಗಡೆರವರು ನಾಲ್ಕು ಕೋಟಿ ರೂ.ಗಳನ್ನು ಕೊಟ್ಟಿದ್ದಾರೆ. ನಾಲ್ಕು ಅಂತಸ್ತಿನ ಕಟ್ಟಡ ಕೆಲಸ ನಡೆಯುತ್ತಿದೆ. ಪಟ್ಟಣದ ಹೊಸದುರ್ಗ ರಸ್ತೆಯಲ್ಲಿರುವ ಶಿವನ ಕೆರೆಯಲ್ಲಿ ಶಿವನ ಪ್ರತಿಮೆಯನ್ನು ಕೂರಿಸಲಾಗಿದೆ. ಅಲ್ಲಿನ ಸ್ಥಳವನ್ನು ಈ ಸಂಸ್ಥೆಗೆ ಧಾರೆ ಎರೆಯುತ್ತಿದ್ದೇನೆಂದರು.

ಸಾರ್ವಜನಿಕರಿಗೆ ಒಳಿತು ಮಾಡುವ ಯೋಜನೆಗೆ ಎಲ್ಲರೂ ಕೈಜೋಡಿಸಬೇಕಿದೆ. ಹುಟ್ಟು–ಸಾವಿನ ನಡುವೆ ಒಳ್ಳೆಯ ಕೆಲಸ ಮಾಡಬೇಕೆಂಬ ಸದುದ್ದೇಶದಿಂದ ಡಾ.ಡಿ.ವೀರೇಂದ್ರಹೆಗಡೆರವರು ಇಡಿ ಸ್ತ್ರೀಕುಲಕ್ಕೆ ಗೌರವ ತಂದಿದ್ದಾರೆ.

ಪುಟ ↘ 2




# ಮದ್ಯವರ್ಜನ ಶಿಬಿರ ಶ್ಲಾಘಿಸಿದ ರಘುಮೂರ್ತಿ

» **ಚಳ್ಳಕೆರೆ**

ಸಮಾಜದಲ್ಲಿ ಪರಿವರ್ತನೆಯನ್ನು ಬಯಸುವುದು ಸ್ವಾಭಾವಿಕವಾದರೂ ಕುಡಿತದ ಚಟಕ್ಕೆ ಒಳಗಾದವರನ್ನು ಆ ಚಟದಿಂದ ದೂರ ಮಾಡಿ ಅವರನ್ನು ಸರಿದಾರಿಗೆ ತರುವುದಲ್ಲದೆ, ಉತ್ತಮ ಜೀವನ ನಡೆಸಲು ಅವಕಾಶ ಮಾಡಿಕೊಡುವ ವೀರೇಂದ್ರ ಹೆಗ್ಗಡೆಯವರ ಮದ್ಯವರ್ಜನ ಶಿಬಿರ ಪರಿಣಾಮಕಾರಿ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಆದಿನಾಥ ಜೈನ ಭವನದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ರಾಜ್ಯಮದ್ಯಪಾನ ಸಂಯಮ ಮಂಡಳಿ, ಪ್ರಗತಿಬಂಧು ಸ್ವಸಹಾಯ ಸಂಘ ಒಕ್ಕೂಟ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಹಮ್ಮಿಕೊಂಡಿದ್ದ 1736ನೇ ಮದ್ಯ ವರ್ಜನ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಮದ್ಯದ ಅಂಗಡಿ ಪ್ರಾರಂಭಿಸುವ ಕಾರ್ಯಕ್ಕೆ ಎಂದೂ ಪ್ರೋತ್ಸಾಹ ನೀಡಿಲ್ಲ, ಮುಂದೆಯೂ ನೀಡಲ್ಲ. ಕುಡಿತವನ್ನು ನಿಯಂತ್ರಿಸಿ ಹೊಸ ಜೀವನಕ್ಕೆ ಕಾಲಿಡುವ ಮದ್ಯವೆಸನಿಗಳ ಮನಪರಿವರ್ತನೆಗೆ ಮದ್ಯವರ್ಜನ ಶಿಬಿರದ ಮೂಲಕ ಹೆಗ್ಗಡೆಯವರು ರಾಜ್ಯಾದ್ಯಂತ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಸ್ವಾಗತಾರ್ಹ. ನಾನು ಸಹ ಅವರ ಈ ಉತ್ತಮ ಚಿಂತನೆಗೆ ಧ್ವನಿಗೂಡಿಸುವೆ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಪಿ.ಓಂಕಾರಪ್ಪ ಮಾತನಾಡಿ, ಮದ್ಯವರ್ಜನ ಶಿಬಿರ ಆಯೋಜನೆ ಮಾಡಿ ಕುಡಿತದ ಚಟದಿಂದ ಅವರನ್ನು ವಿಮುಕ್ತಿಗೊಳಿಸುವ ಕಾರ್ಯ ಸುಲಭಸಾಧ್ಯವಲ್ಲ. ಆದರೆ, ವೀರೇಂದ್ರ ಹೆಗ್ಗಡೆಯವರ ಸಮಾಜ ಪರಿವರ್ತನೆ ಕಾರ್ಯದಲ್ಲಿ ಇದು ಸಹ ಒಂದು. ಪ್ರಸ್ತುತ ಈ ಶಿಬಿರದಲ್ಲಿ 100ಕ್ಕೂ ಹೆಚ್ಚು ಜನರು ಸೇರ್ಪಡೆಯಾಗಿದ್ದು, ಅಪೈಕಿ 40ಕ್ಕೂ ಹೆಚ್ಚು ಜನರು ಕುಡಿತದ ಚಟ ಕೈಬಿಡುವ ಪ್ರತಿಜ್ಞೆ ಮಾಡಿದ್ದಾರೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿಬಿರದ ಅಧ್ಯಕ್ಷ ಆರ್.ದೊಡ್ಡರಂಗಪ್ಪ ವಹಿಸಿದ್ದರು. ವಾಣಿಜ್ಯೋದ್ಯಮಿಸಾಲ್ವೆಂಟ್ ಪ್ರಕಾಶ್, ಜಿಲ್ಲಾ ನಿರ್ದೇಶಕ ವಿನಯಕುಮಾರ್ ಸುವರ್ಣ, ಯೋಜನಾಧಿಕಾರಿ ನಾಗರಾಜು ಕುಲಾಲ್, ಪಿಎಸ್ಐ ಕೆ.ಸತೀಶ್‌ನಾಯ್ಕ, ಜನಜಾಗೃತಿ ವೇದಿಕೆ ಸದಸ್ಯರಾದ ನೇತಾಜಿಪ್ರಸನ್ನ, ಜಂಟಿ ನಿರ್ದೇಶಕ ಮಂಜುನಾಥ, ಸಮಿತಿ ಉಪಾಧ್ಯಕ್ಷರಾದ ಬಿ.ಎಂ.ಭಾಗ್ಯಮ್ಮ, ಸರಸ್ವತಮ್ಮ, ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ, ಬಿ.ಫರೀದ್‌ಖಾನ್, ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ ಮುಂತಾದವರು ಭಾಗವಹಿಸಿದ್ದರು.



### ಸಿದ್ದಾಪುರ ಬೈಪಾಸ್ ಕಾಮಗಾರಿ ವೀಕ್ಷಿಸಿದ ಶಾಸಕ ಟಿ.ರಘುಮೂರ್ತಿ

# ಶೀಘ್ರದಲ್ಲೇ ಸಾರ್ವಜನಿಕ ಸೇವೆಗೆ ಸಮರ್ಪಣೆಯ ಭರವಸೆ



» **ಚಳ್ಳಕೆರೆ**

ಕಳೆದ ಸುಮಾರು ಎರಡು ವರ್ಷಗಳಿಂದ ಚಳ್ಳಕೆರೆ ನಗರದ ಬೆಂಗಳೂರು ರಸ್ತೆಯ ರಾಷ್ಟ್ರೀಯ ಹೆದ್ದಾರಿಯ ಬೈಪಾಸ್ ಕಾಮಗಾರಿ ಚುರುಕಿನಿಂದ ನಡೆದಿದ್ದು, ಶೀಘ್ರದಲ್ಲೇ ಇದನ್ನು ಸಾರ್ವಜನಿಕ ಸೇವೆಗೆ ಸಮರ್ಪಣೆ ಮಾಡಲಾಗುವುದು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕಿನ ಸಿದ್ದಾಪುರ ಗ್ರಾಮದ ಬಳಿ ಹಾದುಹೋಗಿರುವ ಬೈಪಾಸ್ ರಸ್ತೆ ಕಾಮಗಾರಿಯನ್ನು ವೀಕ್ಷಿಸಿ ಮಾತನಾಡಿದರು. ಹಿಂದೆಯೇ ಈ ಕಾಮಗಾರಿ ಅಂತಿಮಗೊಳ್ಳಬೇಕಾಗಿತ್ತು. ಆದರೆ, ಇದುವರೆಗೂ ಕಾಮಗಾರಿ ಮುಂದುವರೆದಿದೆ. ಕಾಮಗಾರಿ ಪೂರ್ಣಗೊಂಡ ನಂತರ ಇದನ್ನು ಸಾರ್ವಜನಿಕ ಸೇವೆಗೆ ಸಮರ್ಪಣೆ ಮಾಡಲಾಗುವುದು. ಈ ನಿಟ್ಟಿನಲ್ಲಿ ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿ ಧನ್ಯ ಮಾತನಾಡಿ, ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ಯಾವುದೇ ಅಡೆತಡೆ ಇಲ್ಲದೆ ನಡೆಯುತ್ತಿವೆ. ಸಿದ್ದಾಪುರ, ಬುಡ್ನಹಟ್ಟಿ ಬೈಪಾಸ್ ರಸ್ತೆ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ತಾತ್ಕಾಲಿಕವಾಗಿ ಕೆಲವು ವಾಹನಗಳನ್ನು ಪರೀಕ್ಷಾರ್ಥವಾಗಿ ಓಡಾಟಕ್ಕೆ ಬಿಡಲಾಗಿದೆ. ಕಾಮಗಾರಿ ಸಂಪೂರ್ಣಗೊಂಡ ನಂತರ ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಪಡೆದು ಇದನ್ನು ಸಾರ್ವಜನಿಕ ಸೇವೆಗೆ ಸಮರ್ಪಣೆ ಮಾಡಲಾಗುವುದು ಎಂದರು.

ನಗರಂಗೆರೆ ಗ್ರಾಮ ಪಂಚಾಯಿತಿ ಸದಸ್ಯ ಪಾತಲಿಂಗಪ್ಪ, ತಿಪ್ಪೇಸ್ವಾಮಿ, ಕಾಂಗ್ರೆಸ್ ಮುಖಂಡ ಕಂದಿಕೆರೆ ಸುರೇಶ್‌ಬಾಬು, ಸುನೀಲ್‌ಕುಮಾರ್, ಗದ್ದಿಗೆ ತಿಪ್ಪೇಸ್ವಾಮಿ, ತಹಶೀಲ್ದಾರ್ ರೇಹಾನ್ ಪಾಷ, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

# ಬಸವತತ್ವ ಇಂದು ವಿಶ್ವತತ್ವವಾಗಿದೆ



» **ಚಳ್ಳಕೆರೆ**

ಯಾವುದೇ ಧಾರ್ಮಿಕ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕಾದಲ್ಲಿ ಶುದ್ಧ ಮನಸ್ಸಿನ ಪವಿತ್ರತೆಯಿಂದ ಕೂಡಿದ ಹೃದಯವಿರಬೇಕು. ನಾವು ನಮ್ಮ ಧರ್ಮವನ್ನು ಪರಿಪಾಲಿಸಿದರೆ ಮಾತ್ರ ನಮ್ಮ ಉಳಿವು ಮತ್ತು ಒಳಿತು ಸಾಧ್ಯವೆಂದು ಕಣ್ವಕುಪ್ಪೆ ಆಶ್ರಮದ ನಾಲ್ವಡಿ ಶಾಂತಲಿಂಗ ಶಿವಾಚಾರ್ಯಸ್ವಾಮೀಜಿ ತಿಳಿಸಿದರು.

ಅವರು, ನಗರದ ಹೂವಿನ ಜಗದೀಶ್ ಮನೆಯಲ್ಲಿ ಹಮ್ಮಿಕೊಂಡಿದ್ದ ಶ್ರೀಶಿವಪಂಚಾಕ್ಷರಿ ಮಹಾಮಂತ್ರ ಲಿಖಿತ ಜಪಯಜ್ಞ ಮಹಾ ಅಭಿಯಾನದ ಧರ್ಮಸಂದೇಶ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ವಹಿಸಿ ಮಾತನಾಡಿದರು.

ರಾಷ್ಟ್ರದ ಇತಿಹಾಸದಲ್ಲಿ 12ನೇ ಶತಮಾನ ಧಾರ್ಮಿಕ ಪರಂಪರೆಯ ಶರಣರ ಮಹಾನ್ ಕಾರ್ಯಗಳ ಶತಮಾನವಾಗಿತ್ತು. ಸಮಸ್ತ ಮನುಕುಲದ ಕಲ್ಯಾಣದ ದೃಷ್ಠಿಯಿಂದ ಜಗಜ್ಯೋತಿ ಬಸವೇಶ್ವರರು ಈ ಶತಮಾನದಿಂದಲೇ ಧಾರ್ಮಿಕ ಕ್ರಾಂತಿಗೆ ಚಾಲನೆ ನೀಡಿದರು. ಜಗಜ್ಯೋತಿ ಬಸವಣ್ಣನವರ ಬಸವತತ್ವ ಇಂದು ವಿಶ್ವತತ್ವವಾಗಿ ಪರಿವರ್ತನೆಯಾಗಿದೆ. ಧಾರ್ಮಿಕ ಕ್ಷೇತ್ರವನ್ನು ಪಾವನಗೊಳಿಸಿದ ಕೀರ್ತಿ ಜಗಜ್ಯೋತಿ ಬಸವೇಶ್ವರರದ್ದು. ಇಂದಿಗೂ ಸಹ ನಾಡಿನ ಕೋಟಿ, ಕೋಟಿ ಭಕ್ತಾದಿಗಳು ಬಸವಣ್ಣನವರ ವಚನಗಳ ಬಗ್ಗೆ ಅಪಾರವಾದ ನಂಬಿಕೆ ವಿಶ್ವಾಸವನ್ನು ಹೊಂದಿ ಮುಂದುವರೆಯುತ್ತಿದ್ದಾರೆ. ಇಂತಹ ವೈಶಿಷ್ಟ್ಯಮಯ ಬಸವಣ್ಣನವರ ವಚನಗಳ ಪರಂಪರೆಯನ್ನು ಮುಂದುವರೆಸುವಲ್ಲಿ ನೀವೆಲ್ಲರೂ ಕೈಜೋಡಿಸಬೇಕು ಎಂದರು.

ನಗರಸಭೆಯ ಮಾಜಿ ಸದಸ್ಯ ಎಚ್.ವಿ.ಪ್ರಸನ್ನಕುಮಾರ್, ವಾಣಿಜ್ಯೋದ್ಯಮಿಗಳಾದ ಕೆ.ಎಂ.ಜಗದೀಶ್, ದೊಣ್ಣಪ್ಪರೆಡ್ಡಿ, ಹೂವಿನಅರುಣಜಗದೀಶ್, ಮಹದೇವಿತಿಪ್ಪೇಸ್ವಾಮಿ, ಪ್ರತಿಭಾ, ಮಂಜುಳ ಮುಂತಾದವರು ಉಪಸ್ಥಿತರಿದ್ದರು.

## ರೇಷ್ಮೆ ಕೃಷಿ ಪ್ರಶಸ್ತಿಗಾಗಿ ರೇಷ್ಮೆ ಬೆಳೆಗಾರರಿಂದ ಅರ್ಜಿ

**ಚಿತ್ರದುರ್ಗ:** ರೇಷ್ಮೆ ಇಲಾಖೆಯಿಂದ 2022–23ನೇ ಸಾಲಿನ ರೇಷ್ಮೆ ಕೃಷಿ ಪ್ರಶಸ್ತಿಗಾಗಿ ಉತ್ತಮ ಪ್ರಗತಿ ಸಾಧಿಸಿರುವ ರೇಷ್ಮೆ ಬೆಳೆಗಾರರಿಂದ ಅರ್ಜಿ ಆಹ್ವಾನಿಸಿದೆ. ಅಕ್ಟೋಬರ್ 17 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕನಿಷ್ಠ 1 ಎಕರೆ ಹಿಪ್ಪುನೇರಳೆ ತೋಟ ಹಾಗೂ ಪ್ರತ್ಯೇಕ ಹುಳು ಸಾಕಾಣಿಕಾ ಮನೆ ಹೊಂದಿರಬೇಕು. 100 ಮೊಟ್ಟೆಗೆ ಸರಾಸರಿ ರೇಷ್ಮೆ ಗೂಡಿನ ಇಳುವರಿ 65 ಕೆ.ಜಿ ಹಾಗೂ 1 ಎಕರೆಗೆ ರೇಷ್ಮೆ ಗೂಡಿನ ಉತ್ಪಾದನೆ 500 ಕೆ.ಜಿ.ಗಿಂತ ಕಡಿಮೆ ಇರಬಾರದು. ರೇಷ್ಮೆ ಬೆಳೆಗಾರರು ರೇಷ್ಮೆ ಪಾಸ್ ಬುಕ್, ರೇಷ್ಮೆ ಮೊಟ್ಟೆ, ಚಾಕಿ ಖರೀದಿಸಿರು ಬಗ್ಗೆ ಹಾಗೂ ರೇಷ್ಮೆ ಗೂಡು ಮಾರಾಟ ಮಾಡಿರುವ ಬಗ್ಗೆ ದಾಖಲಾತಿಗಳನ್ನು ಹೊಂದಿರಬೇಕು. ಅಕ್ಟೋಬರ್ 17ರ ಒಳಗೆ ಅರ್ಜಿಯನ್ನು ಪಡೆದು ಕಚೇರಿಗೆ ಸಲ್ಲಿಸಬೇಕು.

**ಪ್ರಮುಖ ಸುದ್ದಿ**

### ಡಿಸೆಂಬರ್ 30–31 ರಂದು ನಡೆಯಲಿರುವ ಅಂತರ್ ಜಿಲ್ಲಾ ಸಮ್ಮೇಳನ

# ಅಧ್ಯಕ್ಷರನ್ನಾಗಿ ಮಾಡಿರುವುದು ನಮಗೆ ಆತಂಕವನ್ನುಂಟು ಮಾಡಿದೆ

» **ಹೊಸದುರ್ಗ**

ಯಾವುದೇ ಕೆಲಸ ಕಾರ್ಯಗಳು ಮಾಡಿದರೂ ನಕರಾತ್ಮಕ ಮತ್ತು ಸಕರಾತ್ಮಕ ಭಾವನೆ ಬರುವುದು ಸಹಜ. ಅದಕ್ಕೆ ತಲೆಕೆಡಿಸಿಕೊಳ್ಳುವ ಹಾಗಿಲ್ಲ. ಬೈದವರೆನ್ನ ಬಂಧುಗಳೆಂಬಂತೆ ಅವರನ್ನೇ ಬಂಧುಗಳೆನ್ನಬೇಕು. ಯಾರ ಟೀಕೆಗೂ ಗಮನ ಹರಿಸದೇ ಕೆಲಸ ಮಾಡಬೇಕು. ನಮ್ಮನ್ನು ಸಾಹಿತ್ಯ ಸಮ್ಮೇಳನದ ಅಧ್ಯಕ್ಷರನ್ನಾಗಿ ಮಾಡಿರುವುದು ನಮಗೆ ಆತಂಕವನ್ನುಂಟು ಮಾಡಿದೆ ಎಂದು ಸಾಣೇಹಳ್ಳಿಯ ಡಾ:ಶ್ರೀ ಪಂಡಿತರಾಧ್ಯಶಿವಾಚಾರ್ಯ ಸ್ವಾಮೀಜಿಯವರು ತಮ್ಮ ಮನಸ್ಸಿನ ಭಾವನೆಯನ್ನ ಬಿಚ್ಚಿಟ್ಟರು.

ತಾಲೂಕಿನಸಾಣೇಹಳ್ಳಿಯಲ್ಲಿಡಿಸೆಂಬರ್ 30 ಮತ್ತು 31 ರಂದು ನಡೆಯಲಿರುವ ಪ್ರಥಮ ಅಂತರ್ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆಸರ್ವಾಧ್ಯಕ್ಷರಾಗಿಆಯ್ಕೆಯಾದ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳವರನ್ನು ಚಿಕ್ಕಮಗಳೂರು ಹಾಗೂ ಚಿತ್ರದುರ್ಗ ಜಿಲ್ಲೆಗಳ ಕನ್ನಡ ಸಾಹಿತ್ಯ ಪರಿಷತ್ತಿನವರು ಅಧಿಕೃತವಾಗಿ ಸ್ವಾಗತಿಸಿ ಗುರುವಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪಂಡಿತಾರಾಧ್ಯ ಶ್ರೀಗಳು ಎರಡೂ ದಿನಗಳ ಕಾಲ ನಡೆಯಲಿರುವ ಸಾಹಿತ್ಯ ಸಮ್ಮೇಳನಕ್ಕೆ ಮಠದಿಂದ ಯಾವುದೇ ಖರ್ಚುವೆಚ್ಚಗಳು ಕೊಡುವುದಿಲ್ಲ. ಸಮಾರಂಭದಲ್ಲಿ ಕಾಲದ ಪ್ರಜ್ಞೆ ತುಂಬ ಮುಖ್ಯ. ಕಾಲಪ್ರಜ್ಞೆಯನ್ನರಿತು ಕಾರ್ಯಕ್ರಮ ಆಯೋಜನೆ ಮಾಡಬೇಕು ಎಂದು ಎಚ್ಚರಿಸಿದರು.ನಮ್ಮ ಗುರುಗಳಾದ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರಿಗೆ ಡಾಕ್ಟರೇಟ್ ಪದವಿ ವಿಚಾರ ಬಂದಾರ ತಿರಸ್ಕಾರ ಮಾಡಿ ಸ್ವಾಮಿತ್ವ ಎನ್ನುವುದಕ್ಕಿಂತ ಮತ್ತೆ ಪದವಿ ಬೇಕಾ ಎಂದು ಪ್ರಶ್ನೆ ಮಾಡಿದವರು. ಆ ಪರಂಪರೆಯಲ್ಲೇ ಬಂದಿರುವುದು ನಾವು ಎಂದು ಸೂಕ್ಷ್ಮವಾಗಿ ಹೇಳಿದರು.



ಚಿಕ್ಕಮಗಳೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಜಿ.ಸೂರಿಶ್ರೀನಿವಾಸ್ ಮಾತನಾಡಿ ಸಮ್ಮೇಳನದಲ್ಲಿ ಕವಿಗೋಷ್ಠಿ, ಮಾತು–ಮಥನ, ಅನ್ನದಾತರ ಅಳಲು, ಪುಸ್ತಕೋದ್ಯಮ ಮತ್ತು ಸವಾಲುಗಳು, ಧರ್ಮ–ಸಾಹಿತ್ಯ–ಸಂಸ್ಕೃತಿ ಹಾಗೂ ರಂಗಕಲೆಯಲ್ಲಿ ಸಾಣೇಹಳ್ಳಿಯ ಮಠದ ಪಾತ್ರ ಮಹಿಳಾಗೋಷ್ಠಿ, ವಚನ ಪರಂಪರೆ, ಸಾಹಿತ್ಯಸಂವರ್ಧನೆಯಲ್ಲಿಸಂತಪರಂಪರೆ, ಜಾನಪದ ಜಗತ್ತು, ಮಕ್ಕಳ ಸಾಹಿತ್ಯ ಮನೋವಿಕಾಸ, ವರ್ತಮಾನದಲ್ಲಿ ಮಹಿಳೆ ಸೇರಿದಂತೆ ಸುಮಾರು 8 ಗೋಷ್ಠಿಗಳಿಗೂ ಹೆಚ್ಚು ಆಯೋಜನೆ ಮಾಡುವಲ್ಲಿ ಸಮಿತಿ ತೀರ್ಮಾನಿಸಿದ್ದು ಜೋತೆಗೆ ಕಲಾ ಸಂಗಮ, ಸಾಧನೆ ಮನ್ನಣೆ, ಸ್ಮರಣ ಸಂಚಿಕೆ ಹೊರತರುವುದು ನಂತರ ಇದೇ ಕಾರ್ಯಕ್ರಮದಲ್ಲಿ ಬಹಿರಂಗ ಅಧಿವೇಶನ ನಡೆಸಲಾಗುವುದು ಎಂದ ಅವರು

ಡಿ.30 ರಂದು ಸಾಹಿತ್ಯ ಸಮ್ಮೇಳನದ ಉದ್ಘಾಟನೆಗೆಮುಖ್ಯಮಂತ್ರಿಸಿದ್ದರಾಮಯ್ಯ ಅವರನ್ನ ಆಹ್ವಾನಿಸಲಾಗುವುದು, ಜೋತೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಶಿವರಾಜ್‌ತಂಗಡಗಿ ಸೇರಿದಂತೆ ದೊಡ್ಡರಂಗೇಗೌಡ, ಡಾ:ಕಮಲಾಹಂಪನಾ ಸುಧಾಮೂರ್ತಿ ಹಾಗೂ ಎರಡೂ ಜಿಲ್ಲೆಗಳ ಶಾಸಕರುಗಳನ್ನ ಸಾಹಿತಿಗಳು ಸೇರಿದಂತೆ ಹಲವರನ್ನ ಆ ದಿನದ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು ಎಂದರು.ಎರಡೂ ದಿನದ ಕಾರ್ಯಕ್ರಮದ ಗೋಷ್ಠಿಗಳನ್ನ ನಿಗಧಿ ಮಾಡಿರುವ ಸಮಯಕ್ಕೆ ಸರಿಯಾದ ಪ್ರಾರಂಭಗೊಳಿಸಿ ಮುಕ್ತಾಯಗೊಳಿಸಲಾಗುವುದು, ಸಮ್ಮೇಳನದ ಎರಡೂ ದಿನವೂ ಕೂಡ ಸಂಜೆ 7 ಗಂಟಗೆ ಸಾಂಸ್ಕೃತಿಕ ಕಾರ್ಯಕ್ರಮವನ್ನ ಆಯೋಜಿಸಲಾಗುವುದು.

ಡಿ.31 ರಂದು ನಡೆಯಲಿರುವ ಸಮೋರೋಪ ಸಮಾರಂಭಕ್ಕೆ ಗೋ.ರೂ.ಚ ಅವರನ್ನ ಆಹ್ವಾನಿಸುವ ಬಗ್ಗೆ ಈಗಾಗಲೆ ಸಾಕಷ್ಟು ಚರ್ಚೆಗಳು ನಡೆಯುತಿದ್ದು ಮಹಿಳಾಗೋಷ್ಠಿಯ ಅಧ್ಯಕ್ಷತೆಗೆ ಸುಧಾಮೂರ್ತಿ ಅವರನ್ನ ಆಹ್ವಾನಿಸುವ ಬಗ್ಗೆ ಚರ್ಚಿಸಲಾಗುತ್ತಿದೆ ಎಂದರು.

ಚಿತ್ರದುರ್ಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎನ್.ಶಿವಸ್ವಾಮಿ ಮಾತನಾಡಿ ಸಮ್ಮೇಳನ ಜಿಲ್ಲೆಗೆ ಮಾಧರಿಯಾಗಬೇಕಾಗಿದೆ, ನಾವುಗಳು ಮಾಡುವ ಸಮ್ಮೆಳನ ರಾಜ್ಯದಲ್ಲಿ ಹೆಸರಾಗಿ ಉಳಿಯುವ ಕೆಲಸವಾಗಬೇಕಾಗಿದೆ, ಈ ಒಂದು ಸಮ್ಮೇಳನಕ್ಕೆ ರಾಜ್ಯದ ಮೂಲೆ ಮೂಲೆಗಳಿಂದ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದರು.ಇದೇ ಕಾರ್ಯಕ್ರಮದಲ್ಲಿ ಆಯ್ಕೆಯಾದ ಲೇಖಕರ,ಕವಿಗಳ ಪುಸ್ತಕಗಳನ್ನ ಬಿಡುಗಡೆ ಮಾಡಲಾಗುವುದು ಎಂದರು.ಡಿ.31 ರಂದು ಸಾಹಿತ್ಯ ಸಮ್ಮೆಳನದ ಸಮಾರೋಪ ಕಾರ್ಯಕ್ರಮದ ನಂತರ ಶ್ರೀ ಮಠದ ವತಿಯಿಂದ ಪ್ರತಿ ವರ್ಷದಂತೆ ಈ ವಷವೂ ಕೂಡ ಶ್ರೀಗಳ ನೇತೃತ್ವದಲ್ಲಿ ವರ್ಷದ ಹರ್ಷ ಕಾರ್ಯಕ್ರಮವೂ ಕೂಡ ಜರುಗಲಿದ್ದು ಸಮ್ಮೆಳನಕ್ಕೆ ಬಂದ ಕನ್ನಡ ಮನಸ್ಸುಗಳು ಈ ಕಾರ್ಯಕ್ರಮದ ಸದಪಯೋಗ ಪಡೆದುಕೊಂಡು ಹೋಗಬೇಕು ಎಂದು ಮನವಿ ಮಾಡಿದರು.

## ಫಾಸ್ಟ್ ನ್ಯೂಸ್

### ಆಕಾಶವಾಣಿಯಿಂದ ಜೀಯೋ ರೈನ್ ವಾಟರ್ ಬೋರ್ಡ್ ಜಲರಕ್ಷಕರು ಪರಿಚಯಾತ್ಮಕ ವಿಶೇಷ ಕಾರ್ಯಕ್ರಮ

» **ಚಿತ್ರದುರ್ಗ**

ಜೀಯೋ ರೈನ್ ವಾಟರ್ ಬೋರ್ಡ್ ಜಲರಕ್ಷಕರು ಪರಿಚಯಾತ್ಮಕ ವಿಶೇಷ ಕಾರ್ಯಕ್ರಮ ಪ್ರತಿ ಬುಧವಾರ ಬೆಳಿಗ್ಗೆ 7–45 ಕ್ಕೆ ಆಕಾಶವಾಣಿ ಚಿತ್ರದುರ್ಗ ಎಫ್.ಎಂ.ಕೇಂದ್ರದಿಂದ ಪ್ರಸಾರವಾಗಲಿದೆ.

ಜಲಸಂರಕ್ಷಣೆಯಲ್ಲಿ ತೊಡಗಿರುವ ವ್ಯಕ್ತಿಗಳು, ಸಂಸ್ಥೆಗಳನ್ನು ಪರಿಚಯ ಮಾಡಿಕೊಡುವ ಸರಣಿ ಕಾರ್ಯಕ್ರಮದ ಪ್ರತಿ ಸಂಚಿಕೆಯ ಕೊನೆಯಲ್ಲಿ ಪ್ರಶ್ನೆಗಳನ್ನು ಕೇಳಲಾಗುವುದು. ಆಯ್ಕೆಯಾದವರಿಗೆ ಬಹುಮಾನಗಳಿರುತ್ತವೆ. ಕಾರ್ಯಕ್ರಮ ಕೇಳಿ ಜಲಸಂರಕ್ಷಣೆಯಲ್ಲಿ ನೀವು ಕೈಜೋಡಿಸಿ ಎಂದು ಅಂತರ್‌ಜಲ ತಜ್ಞ ಎನ್.ಜೆ.ದೇವರಾಜರೆಡ್ಡಿ ಮನವಿ ಮಾಡಿದ್ದಾರೆ.

### ದುಶ್ಚಟ ಮುಕ್ತ ಸಮಾಜ ನಿರ್ಮಾಣ: ಜನಜಾಗೃತಿ ಜಾಥಕ್ಕೆ ಚಂದ್ರಪ್ಪ ಚಾಲನೆ

» **ಮೊದಲ ಪುಟದಿಂದ**

ದೇಶದ ಬೇರೆ ಬೇರೆ ರಾಜ್ಯಗಳಲ್ಲಿಯೂ ಈ ಯೋಜನೆ ಸಮಾಜಮುಖಿ ಕೆಲಸದಲ್ಲಿ ತೊಡಗಿಕೊಂಡಿದೆ. ಗಾಂಧಿಜಿಯ ಕನಸಿನಂತೆ ಜನಜಾಗೃತಿ ಮೂಲಕ ದುಶ್ಚಟಕ್ಕೆ ಒಳಗಾದವರನ್ನು ವ್ಯಸನಮುಕ್ತರನ್ನಾಗಿ ಮಾಡುತ್ತಿರುವುದು ಪುಣ್ಯದ ಕೆಲಸ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಸಿವಿಲ್ ನ್ಯಾಯಾಧೀಶರಾದ ಎಂ.ಪಿ.ಉಮೇಶ್ ಜಾಥಕ್ಕೆ ಚಾಲನೆ ನೀಡಿದರು.ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಮಾರುತೇಶ್ ಎಸ್. ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸುಮಿತ್ರಕ್ಕ, ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್‌ಪೂಜಾರಿ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರುಗಳಾದ ಎ.ಸಿ.ಗಂಗಾಧರಪ್ಪ, ಮೋಹನ್ ನಾಗರಾಜ್, ಜಿ.ಟಿ.ಪ್ರೇಮಕಲ, ದೇವರಾಜ್, ಸೌಮ್ಯರವಿಶಂಕರ್, ದೇವಣ್ಣ, ರಮೇಶ್‌ಗೌಡ್ರು, ಶ್ರೀಮತಿ ಸವಿತ, ಪುಟ್ಟಸ್ವಾಮಿ, ಪುರಸಭೆ ಮಾಜಿ ಅಧ್ಯಕ್ಷ ಆರ್. ಅಶೋಕ್, ಮಾಜಿ ಉಪಾಧ್ಯಕ್ಷ ಕೆ.ಸಿ.ರಮೇಶ್, ಹೊಳಲ್ಕೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎನ್.ಶಿವಮೂರ್ತಿ, ಸಂದರ್ಭದಲ್ಲಿದ್ದರು.

### ಟಮೋಟೊ ಬೆಳೆಗಾರನ ಸ್ಥಿತಿ ಅದೋಗತಿ

» **ಮೊದಲ ಪುಟದಿಂದ**

ಇದರಿಂದ ರೈತ ಹೆಚ್ಚು ನಷ್ಟ ಅನುಭವಿಸುತ್ತಿದ್ದು ಟಮೋಟೊ ಹಣ್ಣನ್ನು ಗಿಡದಿಂದ ಬೇರ್ಪಡಿಸಿದ ಕೂಲಿಯೂ ಸಿಗುತ್ತಿಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದ್ದಾನೆ.



ತಾಲ್ಲೂಕಿನ ತಳಕು ಹೋಬಳಿಯ ಅಜ್ಜನಹಳ್ಳಿ ಗ್ರಾಮದ ರೈತ ರಂಗಸ್ವಾಮಿ ತನ್ನ ಎರಡು ಎಕರೆ ಜಮೀನಿನಲ್ಲಿ ಒಂದೂವರೆ ಲಕ್ಷ ಖರ್ಚು ಮಾಡಿ ಟಮೋಟೊ ಬೆಳೆದಿದ್ದು, ಈಗ ಟಮೋಟೊವನ್ನು ಚಿಕ್ಕಮ್ಮನಹಳ್ಳಿಯ ಟಮೋಟೊ ಮಾರುಕಟ್ಟೆಗೆ ಮಂಗಳವಾರ ಸುಮಾರು 50 ಬಾಕ್ಸ್ ಹಣ್ಣನ್ನು ಮಾರಾಟ ಮಾಡಲು ತೆಗೆದುಕೊಂಡು ಹೋದಾಗ ಒಂದು ಬಾಕ್ಸಿಗೆ ಕೇವಲ 30ರೂಗೆ ಕೇಳಿದ್ದು ಬೇಸರಗೊಂಡು ಎಲ್ಲಾ ಹಣ್ಣನ್ನು ರಸ್ತೆಗೆ ಸುರಿದೆ. ಇಲ್ಲಿನ ಮಾರುಕಟ್ಟೆಯಲ್ಲೂ ಗುಣಮಟ್ಟದ ಟಮೋಟೊ ಹಣ್ಣಿಗೆ ಒಳ್ಳೆದರ ಸಿಗುತ್ತಿಲ್ಲ. ರೈತರ ಖರೀದಿಯಲ್ಲಿಯೇ ಬಾರಿಪ್ರಮಾಣದ ತಾರತಮ್ಯ ವೆಸಗುವ ಮೂಲಕ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆಂದು ಅವರು ಆರೋಪಿಸಿದ್ದಾರೆ.

ಒಂದು ಬಾಕ್ಸ್ ಟಮೋಟೊ ಹಣ್ಣನ್ನು ಗಿಡದಿಂದ ಕಿತ್ತು ಬಾಕ್ಸ್‌ಗೆ ಹಾಕಲು ಕನಿಷ್ಟ ಪಕ್ಷ 100ರೂ ಕೂಲಿ ಬೇಕಾಗುತ್ತದೆ. ಆದರೆ, ಕೇವಲ 30ರೂಗೆ ಖರೀದಿ ಕೇಳಿದ್ದರಿಂದ ರೈತ ನಿರೀಕ್ಷೆಗೂ ಮೀರಿ ನಷ್ಟಕ್ಕೆ ಒಳಗಾಗುತ್ತಾನೆ. ಒಂದೂವರೆ ಲಕ್ಷ ಹಣ ಖರ್ಚು ಮಾಡಿದರೂ 10 ಸಾವಿರ ಹಣ ಸಹ ವಾಪಾಸ್ ಬರುವಸ್ಥಿತಿಯಲ್ಲಿಲ್ಲ. ಇದರಿಂದ ಮನನೊಂದ ನಾನು ಬೇಸರದಿಂದ ನೋವಿನಿಂದ ಬೆಳೆದ ಹಣ್ಣನ್ನು ರಸ್ತೆಗೆ ಸುರಿಯುತ್ತಿದ್ದೇನೆ. ಕಾರಣ, ಕಡಿಮೆ ದರಕ್ಕೆ ಮಾರಿ ಅಲ್ಲಿ ಯಾರನ್ನೋ ಉದ್ದಾರ ಮಾಡುವ ಬದಲು ಕಡೆಯ ಪಕ್ಷ ಭೂಮಿತಾಯಿಗೆ ಅರ್ಪಣೆ ಮಾಡುತ್ತಿದ್ದೇನೆ ಎಂದಿದ್ದಾನೆ. ಸಂಬಂಧಪಟ್ಟ ತೋಟಗಾರಿಕೆ ಅಧಿಕಾರಿಗಳು, ಮಾರುಕಟ್ಟೆಗೆ ಭೇಟಿ ನೀಡಿ ಅಲ್ಲಿನ ಅವ್ಯವಸ್ಥೆಯನ್ನು ಸರಿಪಡಿಸದೇ ಇದ್ದರೆ ನೂರಾರು ರೈತರು ಸಂಕಷ್ಟಕ್ಕೀಡಾಗುತ್ತಾರೆಂದು ತಮ್ಮ ಅಸಮದಾನವನ್ನು ತೋಡಿಕೊಂಡಿದ್ದಾನೆ.

### ದಸರಾಕ್ಕೆ ಚಾಲನೆ

ನಗರದೇವತೆ ಶ್ರೀ ದುರ್ಗಾದೇವಿ ದೇವಸ್ಥಾನದಲ್ಲಿ ಅಕ್ಟೋಬರ್ 15 ರಂದು ಬೆಳಿಗ್ಗೆ 6.30 ಗಂಟೆಗೆ ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್. ಮಲ್ಲಿಕಾರ್ಜುನ್ ದೀಪ ಬೆಳಗಿಸುವುದರ ಮೂಲಕ 9 ದಿನಗಳ ದಸರಾ ಮಹೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ದೇವಸ್ಥಾನದ ಪುರೋಹಿತರಾದ ನಾಗರಾಜ್ ಜೋಯಿಸ್ ಉಪಸ್ಥಿತರಿರುವರು ಎಂದು ಶ್ರೀ ದುರ್ಗಾದೇವಿ ದೇವಸ್ಥಾನ ಟ್ರಸ್ಟ್ (ರಿ)ನ ಧರ್ಮದರ್ಶಿ ಗೌಡ್ರ ಚನ್ನಬಸಪ್ಪ ತಿಳಿಸಿದ್ದಾರೆ.

**ಫಾಸ್ಟ್ ನ್ಯೂಸ್**

## ಅ.12ರಂದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

» **ದಾವಣಗೆರೆ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಅ.12 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಪಕ್ಕದಲ್ಲಿರುವ ಪ್ರಭಂಜನ ಅಂಡ್ ಕಂಪನಿಯಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್. ಹೆಗಡೆ ಉದ್ಘಾಟಿಸಲಿದ್ದು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಷಣ್ಮುಖಪ್ಪ ಎಸ್. ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ಮಹಾವೀರ ಮ, ಕರೆಣ್ಣವರ, ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ. ಮಂಜುನಾಥ್ ಎಲ್. ಪಾಟೀಲ್, ಹಿರಿಯ ನ್ಯಾಯವಾದಿ ಮತ್ತು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್ ಅರುಣ್ ಕುಮಾರ್, ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಜಿಲ್ಲಾ ಅಧಿಕಾರಿ ಡಾ. ಕೆ.ಕೆ ಪ್ರಕಾಶ್, ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ. ಇಬ್ರಾಹಿಂ ಸಾಬ್, ಜಿಲ್ಲಾ ಮನೋವೈದ್ಯ ಡಾ. ಮರಳಸಿದ್ದಪ್ಪ ಪಿ.ಎಂ ಉಪಸ್ಥಿತರಿರುವರು.

## ಪಡಿತರ ಆಹಾರ ಧಾನ್ಯ ಹಂಚಿಕೆ

» **ದಾವಣಗೆರೆ**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಅಕ್ಟೋಬರ್ ಮಾಹೆಯಲ್ಲಿ ಬಿಡುಗಡೆಯಾದ ಪಡಿತರ ಆಹಾರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ 21 ಕೆ.ಜಿ ಅಕ್ಕಿ ಮತ್ತು ರಾಗಿ 14ಕೆ.ಜಿ ಪ್ರತಿ ಕಾರ್ಡಿಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.ಸರ್ಕಾರದ ಗ್ಯಾರಂಟಿ ಯೋಜನೆಯಡಿ 5ಕೆ.ಜಿ ಅಕ್ಕಿ ಬದಲಾಗಿ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆ ಮಾಡುತ್ತಿದ್ದು, ಹಣ ಪಡೆಯಲು ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ತಮ್ಮ ಬ್ಯಾಂಕ್ ಅಥವಾ ಸ್ಥಳೀಯ ಅಹಾರ ನಿರೀಕ್ಷಕರನ್ನು ಸಂಪರ್ಕಿಸಿ ಪರಿಹರಿಸಿಕೊಳ್ಳಬಹುದೆಂದು ಜಿಲ್ಲಾ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಇಲಾಖೆಯ ಉಪ ನಿರ್ದೇಶಕ ಶಿದ್ರಾಮ ಮಾರಿಹಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿರುದ್ಯೋಗಿಗಳಿಗೆ ಉಚಿತ ತರಬೇತಿ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಗ್ರಾಮಾಂತರ ಕೈಗಾರಿಕಾ ವಿಭಾಗ ಕಚೇರಿಯ ಜಿಲ್ಲಾ ಉದ್ಯಮ ಕೇಂದ್ರ ಕಾರ್ಯಕ್ರಮದಡಿ ಗ್ರಾಮೀಣ ಪ್ರದೇಶದ ವಿದ್ಯಾವಂತ ನಿರುದ್ಯೋಗಿಗಳಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯ ಅನುಮೋದಿತ ತರಬೇತಿ ಸಂಸ್ಥೆಗಳ ಮೂಲಕ ನಿಗಧಿತ ಅವಧಿಗೆ ಉಚಿತ ತರಬೇತಿಯನ್ನು ಆಯೋಜಿಸಲಾಗಿದೆ.

**ತರಬೇತಿ ವಿವರ:** ಆರ್ಕ್ ಮತ್ತು ಗ್ಯಾಸ್ ವೆಲ್ಡಿಂಗ್, ಮೋಟಾರ್ ರೀವೈಡಿಂಗ್, ಬ್ಯೂಟಿ ಥೆರಫಿಸ್ಟ್, ಫೀಲ್ಡ್ ಟೆಕ್ನೀಷಿಯನ್ ಅಂಡ್ ಕಂಪ್ಯೂಟಿಂಗ್ ಪೆರಿಫೆರಲ್, ಡೊಮೆಸ್ಟಿಕ್ ಎಲೆಕ್ಟ್ರಿಷಿಯನ್ ಮತ್ತು ಹೌಸ್ ವೈರಿಂಗ್, ಟಿ.ವಿ ರಿಪೇರಿ ಆಸಕ್ತ ನಿರುದ್ಯೋಗಿಗಳು ತಮ್ಮ ಗ್ರಾಮಪಂಚಾಯಿತಿ ಅಥವಾ ಉಪನಿರ್ದೇಶಕರ ಕಚೇರಿ(ಖಾಗ್ರಾ), ಗ್ರಾಮೀಣ ಕೈಗಾರಿಕಾ ವಿಭಾಗ,ಪ್ಲಾಟ್ ನಂ76(ಪಿ1), ಕರೂರು ಕೈಗಾರಿಕಾ ಪ್ರದೇಶ, ಪಿ.ಬಿ.ರಸ್ತೆ, ದಾವಣಗೆರೆ ಕಚೇರಿಯಿಂದ ಅರ್ಜಿಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಅ.21 ರೊಳಗೆ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9448929717 ನ್ನು ಸಂಪರ್ಕಿಸಲು ಗ್ರಾಮಾಂತರ ಕೈಗಾರಿಕಾ ವಿಭಾಗದ ಉಪನಿರ್ದೇಶಕರಾದ ಸುರೇಶ್.ಹೆಚ್ ತಿಳಿಸಿದ್ದಾರೆ.

## ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ

» **ದಾವಣಗೆರೆ**

ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ ಸೌಲಭ್ಯ ಪಡೆಯಲು ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ನಿಗಮದ ವೆಬ್‌ಸೈಟ್ https://kvldcl.karnataka.gov.in ಅಥವಾ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ ದಾವಣಗೆರೆ ದೂ.ಸಂ 08192-230934 ಸಂಪರ್ಕಿಸಬಹುದು.

# ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ತರಲು ಸಿದ್ಧರಾಗಿ

» **ಚಿತ್ರದುರ್ಗ**

ರಾಜ್ಯದ ಜನ ನಿರೀಕ್ಷೆಯಿಟ್ಟು ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ಜನರ ಮನಸ್ಸಿಗೆ ಬೇಸರವಾಗದಂತೆ ನಡೆದುಕೊಳ್ಳಬೇಕು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಮಂಗಳವಾರ ಭೇಟಿ ನೀಡಿದ ಅವರು ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡುತ್ತ ವಿಧಾನಸಭಾ ಚುನಾವಣಾ ಪೂರ್ವದಲ್ಲಿಯೇ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಇವರುಗಳು ಐದು ಉಚಿತ ಗ್ಯಾರೆಂಟಿಗಳನ್ನು ಘೋಷಿಸಿದರು. ಅದರಂತೆ ಅಧಿಕಾರಕ್ಕೆ ಬಂದ ಕೂಡಲೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಾಲ್ಕು ಗ್ಯಾರೆಂಟಿಗಳನ್ನು ಈಡೇರಿಸಿದ್ದಾರೆ. ಇನ್ನೊಂದು ಗ್ಯಾರೆಂಟಿಯನ್ನು ತಲುಪಿಸುತ್ತಾರೆ. ಮುಂದಿನ ವರ್ಷ ಲೋಕಸಭಾ ಚುನಾವಣೆ ಎದುರಾಗಲಿದೆ. ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕಾಗಿರುವುದರಿಂದ ಕಾರ್ಯಕರ್ತರು ಈಗಿನಿಂದಲೆ ಸಿದ್ದರಾಗಬೇಕು ಎಂದು ಕರೆ ನೀಡಿದರು.ಜನತೆಗೆ ಗ್ಯಾರೆಂಟಿಗಳನ್ನು ನೀಡುವುದಷ್ಟೆ ಸರ್ಕಾರದ ಕೆಲಸವಲ್ಲ. ಜನರು ನಮ್ಮ ಮೇಲೆ ಇಟ್ಟಿರುವ ಭರವಸೆಗೆ ಚ್ಯುತಿ ಬಾರದಂತೆ ಸರ್ಕಾರವನ್ನು ಮುನ್ನಡೆಸಿಕೊಂಡು ಹೋಗಬೇಕಿದೆ. ಕಂದಾಯ ಇಲಾಖೆಯಲ್ಲಿ ಸಾಕಷ್ಟು ಸಮಸ್ಯೆಗಳಿವೆ. ಹಂತ ಹಂತವಾಗಿ ಎಲ್ಲವನ್ನು ಬಗೆಹರಿಸಲಾಗುವುದು. ಜಿಲ್ಲೆಯ ಕೆಲವು ಕಡೆ ಭೇಟಿ ನೀಡಿ ಪರಿಶೀಲಿಸಿದ್ದೇನೆ. ಮಧ್ಯಕರ್ನಾಟಕದ ಬಯಲು ಸೀಮೆ ಮೊದಲಿನಿಂದಲೂ ಬರಗಾಲವನ್ನು ಎದುರಿಸಿಕೊಂಡು ಬರುತ್ತಿದೆ. ಹಾಗಾಗಿ ಚಿತ್ರದುರ್ಗ ಜಿಲ್ಲೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಅಭಿವೃದ್ದಿ ಹೊಂದಬೇಕಾಗಿರುವುದರಿಂದ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಭರವಸೆ ಕೊಟ್ಟರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮಾತನಾಡಿ ಕೃಷ್ಣಭೈರೇಗೌಡರು ಈ ಹಿಂದೆಯೂ ಸಚಿವರಾಗಿದ್ದವರು. ಆದ್ದರಿಂದ ನಮ್ಮ ಜಿಲ್ಲೆಯ ಪರಿಸ್ಥಿತಿ ಚೆನ್ನಾಗಿ ಗೊತ್ತಿದೆ. ಚಿತ್ರದುರ್ಗ ಜಿಲ್ಲೆ ಸದಾ ಬರಪೀಡಿತ ಪ್ರದೇಶ. ಜನ ಸಾಕಷ್ಟು ನಿರೀಕ್ಷೆಯಿಟ್ಟುಕೊಂಡು ಕಾಂಗ್ರೆಸ್ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತಂದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್ ಇವರುಗಳು ಜನರ ನಿರೀಕ್ಷೆ ಹುಸಿಯಾಗದಂತೆ ಕೆಲಸ ಮಾಡುತ್ತಿದ್ದಾರೆ. ಪಾರ್ಲಿಮೆಂಟ್ ಚುನಾವಣೆಯಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಂತೆ ಕಾಯಕರ್ತರಲ್ಲಿ ಮನವಿ ಮಾಡಿದರು. ಶಾಸಕ ಕೆ.ಸಿ.ವೀರೇಂದ್ರಪಪ್ಪಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಇವರುಗಳು ಮಾತನಾಡಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಪಿ.ಸಂಪತ್‌ಕುಮಾರ್, ಹಿರಿಯ ಉಪಾಧ್ಯಕ್ಷ ಡಿ.ಟಿ.ವೆಂಕಟೇಶ್, ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್, ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷೆ ಶ್ರೀಮತಿ ಗೀತನಂದಿನಿಗೌಡ, ಯುವ ಮುಖಂಡ ಜೆಜೆ.ಹಟ್ಟಿಯ ಡಾ.ತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಯೋಗೇಶ್‌ಬಾಬು, ಸೈಯದ್ ಖುದ್ದೂಸ್, ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್, ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಅಬ್ದುಲ್ಲಾ, ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್, ಮೆಹಬೂಬ್ ಖಾತೂನ್, ಕಾಂಗ್ರೆಸ್ ಕಿಸಾನ್‌ಸೆಲ್ ವಿಭಾಗದ ಜಿಲ್ಲಾ ಉಪಾಧ್ಯಕ್ಷ ಶಿವಲಿಂಗಪ್ಪ, ಹೆಚ್.ಶಬ್ಬೀರ್‌ಭಾಷ, ಚಾಂದ್‌ಪೀರ್, ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಫಾತ್ಯರಾಜನ್, ನ್ಯಾಯವಾದಿಗಳಾದ ಸುದರ್ಶನ್ ಈ ಸಂದರ್ಭದಲ್ಲಿದ್ದರು.



## ಕಂದಾಯ ಇಲಾಖೆಗೆ ಇನ್ನಷ್ಟು ವೇಗ: ಕೃಷ್ಣಭೈರೇಗೌಡ

» **ಚಿತ್ರದುರ್ಗ**

ರೆಕಾರ್ಡ್ ರೂಂಗಳಲ್ಲಿ ಹಳೆ ದಾಖಲೆಗಳನ್ನು ಸ್ಕ್ಯಾನ್ ಮಾಡಿ ದಾಖಲೆಗಳನ್ನು ಉಳಿಸಲಾಗುವುದು. ಇದರಿಂದ ಜನರಿಗೆ ಸುಲಲಿತವಾಗಿ ದಾಖಲೆಗಳು ಸಿಗುವಂತಾಗುತ್ತದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಮಂಗಳವಾರ ಭೇಟಿ ನೀಡಿದ್ದ ಸಚಿವರು ಸುದ್ದಿಗಾರರೊಂದಿಗೆ ಮಾತನಾಡುತ್ತ ಜಿಲ್ಲೆಯ ಬರ ಪರಿಸ್ಥಿತಿಯನ್ನು ವೀಕ್ಷಿಸಿ ಗ್ರಾಮ ಲೆಕ್ಕಾಧಿಕಾರಿ, ನಾಡ ಕಚೇರಿ, ತಾಲ್ಲೂಕು ಕಚೇರಿಗೆ ಭೇಟಿ ನೀಡಿದಾಗ ಕೆಲವು ಕಡೆ ಹಳೆ ದಾಖಲೆಗಳು ಪುಡಿ ಪುಡಿಯಾಗಿರುವುದು ಕಂಡು ಬಂದಿತು. ಅದಕ್ಕಾಗಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಸಂರಕ್ಷಿಸಲಾಗುವುದು. ಒಂದು ವೇಳೆ ದಾಖಲೆಗಳು ಕಳೆದರೆ ನೈಜ ರೈತರು ತೊಂದರೆ ಅನುಭವಿಸಿದಂತಾಗಿ ಬೋಗಸ್ ದಾಖಲೆಗಳನ್ನು ಸೃಷ್ಠಿಸುವವರಿಗೆ ದಾರಿ ಮಾಡಿಕೊಟ್ಟಂತಾಗುತ್ತದೆ. ಜನಸಾಮಾನ್ಯರು, ರೈತರು ಕಂದಾಯ ಇಲಾಖೆಗೆ ಸುತ್ತುವುದನ್ನು ತಪ್ಪಿಸುವುದು ನಮ್ಮ ಉದ್ದೇಶ. ಕಂದಾಯ ಇಲಾಖೆಯಲ್ಲಿ ಸಾಕಷ್ಟು ಸಮಸ್ಯೆಗಳಿವೆ. ವೇಗವಾಗಿ ಕೆಲಸವಾಗಲು ಕ್ರಮ ಕೈಗೊಳ್ಳುವುದಾಗಿ ಹೇಳಿದರು.ಬಿಜೆಪಿ. ಜೆಡಿಎಸ್. ಒಳ ಒಪ್ಪಂದ ಮಾಡಿಕೊಂಡಿರುವುದೇ ಕಾಂಗ್ರೆಸ್ ನಾಯಕರುಗಳಿಗೆ ತೊಂದರೆ ಕೊಡುವುದಕ್ಕಾಗಿ ಎನ್ನುವುದು ಗೊತ್ತಾಗಿದೆ. ರಾಜ್ಯದ ಜನ ಕಾಂಗ್ರೆಸ್ ಪಕ್ಷಕ್ಕೆ ಆಶೀರ್ವದಿಸಿ ಅಧಿಕಾರ ನೀಡಿದ್ದಾರೆ. ಎಲ್ಲಾ ಸವಾಲು, ಸಮಸ್ಯೆಗಳನ್ನು ಎದುರಿಸಲು ಸಿದ್ದರಿದ್ದೇವೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಕೂಡಲೆ ಉಚಿತ ಗ್ಯಾರೆಂಟಿಗಳನ್ನು ಘೋಷಿಸಿರುವುದು ಬಿಜೆಪಿ. ಮತ್ತು ಜೆಡಿಎಸ್.ಗೆ ಕಣ್ಣು ಕುಕ್ಕುತ್ತಿದೆ. ಬಡವರು, ರೈತರು, ದುಡಿಯುವವರ ಪರ ನಮ್ಮ ಸರ್ಕಾರವಿರುವುದನ್ನು ನೋಡಿ ಅವರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ಸೇಡಿನ ರಾಜಕಾರಣ ಮಾಡುತ್ತಿದ್ದಾರೆಂದರು.

ಡಿಸೆಂಬರ್, ಜನವರಿ ಒಳಗೆ ಒಂದುವರೆ ಸಾವಿರ ಗ್ರಾಮ ಲೆಕ್ಕಾಧಿಕಾರಿಗಳು, ಒಂದು ಸಾವಿರ ಸರ್ವೆಯರ್‌ಗಳನ್ನು ನೇಮಕ ಮಾಡಿಕೊಳ್ಳಲಾಗುವುದು. 357 ಸರ್ಕಾರಿ ಸರ್ವೆಯರ್‌ಗಳು ಹಾಗೂ ಲೈಸೆನ್ಸ್ ಸರ್ವೆಯರ್‌ಗಳನ್ನು ನೇಮಕ ಮಾಡಲಾಗುವುದು ಎಂದರು.

# ಸ್ವಚ್ಛತೆ ಎಲ್ಲಿ ಇರುತ್ತದೋ ಅಲ್ಲಿ ಆರೋಗ್ಯ ಸಮಾಜ ನಿರ್ಮಾಣವಾಗುತ್ತದೆ: ಯಲ್ಲಪ್ಪ

» **ಹೊಸದುರ್ಗ**

ಸ್ವಚ್ಚತೆ ಪ್ರತಿಯೊಬ್ಬ ನಾರೀಕನ ಆಧ್ಯ ಕರ್ತವ್ಯವಾಗಿರುತ್ತದೆ, ನಮ್ಮ ಸುತ್ತ ಮುತ್ತಲಿನ ಪರಿಸರವನ್ನ ನಾವು ಸಂಪೂರ್ಣವಾಗಿ ಸ್ವಚ್ಚತೆಯಿಂದ ಇಟ್ಟುಕೊಳ್ಳುವಲ್ಲಿ ಸಫಲರಾಗಬೇಕಾಗಿದೆ ಸ್ವಚ್ಚತೆ ಎಲ್ಲಿ ಇರುತ್ತದೋ ಅಲ್ಲಿ ಆರೋಗ್ಯ ಸಮಾಜ ನಿರ್ಮಾಣವಾಗುತ್ತದೆ. ಎಂದು ಶ್ರೀ ಮಾರುತಿ ವಾಯು ವಿಹಾರ ಸಂಘದ ಅಧ್ಯಕ್ಷ ಟಿ.ಯಲ್ಲಪ್ಪ ಕರೆ ಅಭಿಪ್ರಾಯಿಸಿದರು.

ಶ್ರೀ ಮಾರುತಿ ವಾಯು ವಿಹಾರ ಸಂಘದ ಹಾಗೂ ತಾಲೂಕು ಕ್ರೀಡಾ ಇಲಾಖೆ ಹೊಸದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ಭಾನುವಾರ ಪಟ್ಟಣದ ಸ್ಟೇಡಿಯಂನಲ್ಲಿ ಹಮ್ಮಿಕೊಂಡಿದ್ದ ಕ್ರೀಡಾಂಗಣ ಸಂಪೂರ್ಣ ಸ್ವಚ್ಚತಾ ಸ್ವಚ್ಚತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸ್ವಚ್ಚತೆ ಎಂದರೆ ಕೆಲವು ಕಡೆ ಸಂಪೂರ್ಣವಾಗಿ ಮರೀಚಿಕೆಯಾಗಿಬಿಟ್ಟಿದೆ ವಿದ್ಯಾವಚಿತರಾದ ನಾವುಗಳು ಸ್ವಚ್ಚತೆಯ ಬಗ್ಗೆ ಸಂಪೂರ್ಣ ಜಾಗೃತರಾಗಬೇಕಾಗಿದೆ,ಸ್ವಚ್ಚತೆಯ ಬಗ್ಗೆ ಸಾರ್ವಜನಿಕವಾಗಿ ಅರಿವು ಮೂಡಿಸುವ ಕೆಲಸವಾಗಬೇಕಾಗಿದೆ ಎಂದ ಅವರು ನಮ್ಮ ಸಂಘದಿಂದ ಈಗಾಗಲೇ ತಾಲೂಕಿನ ಸಾಕಷ್ಟು ಪುಣ್ಯ ಕ್ಷೇತ್ರಗಳಲ್ಲಿ ಸ್ವಚ್ಚತಾ ಅಭಿಯಾನ ಎಂಬ ಕಾರ್ಯಕ್ರಮದಡಿಯಲ್ಲಿ ದೇವಸ್ಥಾನಗಳ ಸುತ್ತ ಮುತ್ತಲಿನ ಸ್ಥಳಗಳನ್ನ ಸಂಪೂರ್ಣವಾಗಿ ಸ್ವಚ್ಚಗೊಳಿಸುವ ಮೂಲಕ ಆಯಾ ಪ್ರದೇಶದ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿಯನ್ನ ಮೂಡಿಸಲಾಗುತ್ತದೆ ಎಂದರು.



ತಾಲೂಕು ಕ್ರೀಡಾ ಮತ್ತು ಯುವ ಜನ ಸೇವಾ ಇಲಾಖೆಯ ಅಧಿಕಾರಿ ಮಹಂತೇಶ್ ಮಾತನಾಡಿ ಪಟ್ಟಣದ ಕ್ರೀಡಾಂಗಣದಲ್ಲಿ ಸಾಕಷ್ಟು ಮಂದಿ ಅನಾಗರೀಕರಂತೆ ನಡೆದುಕೊಳ್ಳುತ್ತಿದ್ದಾರೆ ಇದಕ್ಕೆ ಯುವಕರೂ ಕೂಡ ಹೊರತಾಗಿಲ್ಲ ಇದೇ ಪ್ರದೇಶದ ಸಾರ್ವಜನಿಕರು ಓಡಾಡುವ ಸುತ್ತಾಡುವ ಜಾಗದಲ್ಲಿ ಪಾನ್‌ಪರಾಗ್ ಎಲೆ ಅಡಿಕೆ ಬೀಡಿ ಸಿಗರೇಟ್ ಸೇವಿಸಿ ವಾಕ್ ಮಾಡುವ ಸಾರ್ವಜನಿಕರಿಗೆ ಕಿರಿ ಕಿರಿ ಉಂಟು ಮಾಡುತಿದ್ದಾರೆ ಇನ್ನು ಮುಂದೆ ಇಂತಹ ಸನ್ನಿವೇಶಗಳು ಕಂಡು ಬಂದದ್ದೆ ಆದರೆ ಅವರನ್ನು ಠಾಣೆಗೆ ಕರೆಸಿ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂಬ ಎಚ್ಚರಿಕೆಯ ಸಂದೇಶವನ್ನ ನೀಡಿದರು.

ಈ ಸಂಧರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷ ಹೆಚ್.ಓರಗಲ್ಲಪ್ಪ, ಪೋಸ್ಟ್ ಜಗನ್ನಾಥ್, ಟೈಲರ್‌ಗಂಗಣ್ಣ, ಶಿವಣ್ಣ,ಎಲ್‌ಐಸಿ ಲೋಕೇಶ್,ಸ್ಟೇಡಿಯಂ ಡಿ ಧರ್ಜೆ ನೌಕರರಾದ ಮೈಲಾರಪ್ಪ,ನಿಂಗಪ್ಪ ಪ್ರಕಾಶ್ ಸೇರಿದಂತೆ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

## ಮಕ್ಕಳಿಗೆ ಶೈಕ್ಷಣಿಕ ವರ್ಷದ 2ನೇ ಹಂತದ ಶಾಲಾ ಸಮವಸ್ತ್ರ ವಿತರಣೆ



» **ನಾಯಕನಹಟ್ಟಿ**

ಪೋಷಕರು ತಮ್ಮ ಮಕ್ಕಳನ್ನು ತಪ್ಪದೆ ಶಾಲೆಗೆ ಕಳುಹಿಸಿದರೆ ನಾವು ಉತ್ತಮವಾಗಿ ಓದುವುದಕ್ಕೆ ಅನುಕೂಲವಾಗುತ್ತದೆ ಎಂದು ಹೇಳಿದರು ಮತ್ತು ಮಕ್ಕಳಿಗೆ ಅವರಿಗೆ ಹಲವಾರು ಹಕ್ಕುಗಳಿವೆ ಅವುಗಳನ್ನು ನಾವು ಉಳಿಸಬೇಕು. ಮಕ್ಕಳಿಗೆ ಗುಣಮಟ್ಟ ಶಿಕ್ಷಣ ಕೊಟ್ಟರೆ ಅವರು ಮುಖ್ಯವಾಹಿನಿಗೆ ಬರುತ್ತದೆ ಎಂದು ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಚನ್ನಬಸಪ್ಪ ಹೇಳಿದರು.

ನಾಯಕನಹಟ್ಟಿ ಹೋಬಳಿ ಅಬ್ಬೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಶೈಕ್ಷಣಿಕ ವರ್ಷದ 2ನೇ ಹಂತದ ಸಮವಸ್ತ್ರವನ್ನು ಶಾಲಾ ಮಕ್ಕಳಿಗೆ ವಿತರಿಸಿದರು. ನಂತರ ಮಾತನಾಡಿದ ಅವರು ಪೋಷಕರು ಮಕ್ಕಳಿಗೆ ಮೊಬೈಲ್ ಕೊಡಬೇಡಿ ಓದುವ ಕಡೆಗೆ ಹೆಚ್ಚಿನ ಗಮನಹ ಹರಿಸಬೇಕೆಂದು ತಿಳಿಸಿದರು. ಶಿಕ್ಷಕರು ಮಾಡಿದ ಪಾಠವನ್ನು ವಿದ್ಯಾರ್ಥಿಗಳು ಶ್ರದ್ಧೆಯಿಂದ ಕೇಳಬೇಕು ಸಾಯಂಕಾಲ ಸಮಯದಲ್ಲಿ ನಿಮ್ಮ ಪೋಷಕರು ಮಕ್ಕಳಿಗೆ ಪಾಠವನ್ನು ಕಲಿಸಬೇಕು ಎಂದು ಹೇಳಿದರು.

ಪೋಷಕರು ತಮ್ಮ ಮಕ್ಕಳೊಂದಿಗೆ ಯಾವಗಲೂ ಒಬ್ಬ ಒಳ್ಳೆಯ ಸ್ನಹಿತನಂತೆ ಇರಬೇಕು ಪ್ರೀತಿಯಿಂದ ಮಾತನಾಡಿ ಮನೆ ಪಾಠವನ್ನು ಹೇಳಿಕೊಡುವಾಗ ಗಧರಿಸಿ ಹೇಳುವುದರ ಬದಲು ಪ್ರೀತಿಯಿಂದ ಪಾಠ ಹೇಳಿಕೊಡಬೇಕು. ಆಗ ಮಕ್ಕಳು ಖುಷಿಯಿಂದ ಮತ್ತು ಬಹಳ ಆಸಕ್ತಿಯಿಂದ ಓದುವ ಕಡೆಗೆ ಹೆಚ್ಚಿನ ಗಮನಹ ಹರಿಸುತ್ತಾರೆ ಎಂದು ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಚನ್ನಬಸಪ್ಪ ಹೇಳಿದರು.

**ಪ್ರಮುಖ ಸುದ್ದಿ**

# ಅಹಿಂಸೆ, ತ್ಯಾಗದ ಮೂಲಕ ಗಾಂಧಿ ಮಹಾತ್ಮರಾದರು

» **ಚಿತ್ರದುರ್ಗ**

ಸತ್ಯ, ಅಹಿಂಸೆ, ತ್ಯಾಗದ ಮೂಲಕ ಗಾಂಧಿ ಮಹಾತ್ಮರೆನಿಸಿಕೊಂಡರು ಎಂದು ಖ್ಯಾತ ನ್ಯಾಯವಾದಿ ಹಾಗೂ ಚಿನ್ಮೂಲಾದ್ರಿ ಸಾಹಿತ್ಯ ವೇದಿಕೆ ಗೌರವಾಧ್ಯಕ್ಷ ಬಿ.ಕೆ. ರಹಮತ್‌ವುಲ್ಲಾ ಹೇಳಿದರು.

ಮನೆಯಂಗಳದಲ್ಲಿ ಸಾಹಿತ್ಯ ಸಂಸ್ಕೃತಿ ವೇದಿಕೆ ವತಿಯಿಂದ ಚಳ್ಳಕೆರೆ ಗೇಟ್ ಹತ್ತಿರ ವಿಘ್ನೇಶ್ವರ ಲೇಔಟ್‌ನಲ್ಲಿರುವ ಎಂ.ಹೊನ್ನೂರ್ ಸಾಹೇಬ್‌ರವರ ನಿವಾಸದಲ್ಲಿ ಗಾಂಧಿಜಯಂತಿ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಮರೆಯಬಾರದ ಮಹಾತ್ಮ ಉಪನ್ಯಾಸ ಮತ್ತು ಕವಿಗೋಷ್ಠಿ ಉದ್ಘಾಟಿಸಿ ಮಾತನಾಡಿದರು.

ಹನ್ನೆರಡನೆ ಶತಮಾನದ ಬಸವಣ್ಣ, ಬುದ್ದ, ಏಸುಕ್ರಿಸ್ತ, ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಇವರುಗಳೆಲ್ಲಾ ಸಮ ಸಮಾಜಕ್ಕಾಗಿ ಹೋರಾಡಿದಂತ ಮಹಾತ್ಮರು. ದೇಶವನ್ನು ಬ್ರಿಟೀಷರ ಗುಲಾಮಗಿರಿಯಿಂದ ಬಿಡಿಸಿಕೊಳ್ಳುವುದಕ್ಕಾಗಿ ಮಹಾತ್ಮಗಾಂಧಿ ಸತ್ಯ ಮತ್ತು ಅಹಿಂಸೆಯ ಮೂಲಕ ಹೋರಾಡಿದರು. ಅಂತಹ ಮಹಾತ್ಮನನ್ನು ಗುಂಡಿಕ್ಕಿ ಕೊಂದ ಗೋಡ್ಸೆಯನ್ನು ವೈಭವಿಕರಿಸುತ್ತಿರುವುದು ಮನಸ್ಸಿಗೆ ಅತೀವ ನೋವುಂಟು ಮಾಡಿದೆ ಎಂದು ಬೇಸರ ವ್ಯಕ್ತಪಡಿಸಿದರು.



ದಕ್ಷಿಣ ಆಫ್ರಿಕಾದಲ್ಲಿ ಗಾಂಧಿ ಕರಿಯ ಮತ್ತು ಬಿಳಿಯ ಎನ್ನುವ ವರ್ಣಭೇದದ ವಿರುದ್ದ ಹೋರಾಡಿದರು. ದಯೆಯೆ ಧರ್ಮದ ಮೂಲವಯ್ಯ ಎನ್ನುವುದು ಬಸವಣ್ಣನವರ ಸಂದೇಶವಾಗಿತ್ತು. ಬುದ್ದ, ಏಸುಕ್ರಿಸ್ತ ಇವರುಗಳು ಶಾಂತಿಯ ಧ್ಯೋತಕವಾಗಿದ್ದರು. ಇಂತಹ ಮಹಾತ್ಮರುಗಳ ಫೋಟೋಗಳೆಲ್ಲಾ ಮುಂದೊಂದು ದಿನ ಮರೆಯಾಗಿ ಗಾಂಧಿಯನ್ನು ಕೊಂಡ ಗೋಡ್ಸೆಯ ಭಾವಚಿತ್ರ ಬಂದರೂ ಬರಬಹುದು. ಸಮಾನತೆಗಾಗಿ ಹೋರಾಡಿದ ಎಲ್ಲಾ ಮಹಾನ್‌ಪುರುಷರ ಜೀವನ ದುರಂತದಲ್ಲಿ ಅಂತ್ಯಕಂಡಿತು ಎಂದು ವಿಷಾಧಿಸಿದರು.

ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಡಾ.ಹೇಮಂತರಾಜು ಎಸ್. ಎನ್. ಮಾತನಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ ಮಹಾತ್ಮಗಾಂಧಿ ಹಿಂದಿಗಿಂತಲೂ ಈಗಿನ ಕಾಲಕ್ಕೆ ಹೆಚ್ಚು ಪ್ರಸ್ತುತ. ಹೃದಯವಂತಿಕೆಯಿಂದ ಗಾಂಧಿ ಜಗತ್ತನ್ನು ಗೆದ್ದರು. ವಿರೋಧಾಭಾಸ, ವೈರುದ್ದವನ್ನು ತುಂಬಿಕೊಂಡಿದ್ದರು. ಮನುಕುಲವನ್ನು ಮೇಲೆತ್ತಲು ಹೊರಟ ಮಹಾತ್ಮಗಾಂಧಿ ಹಠವಾದಿಯಾಗಿದ್ದರು. ಪ್ರತಿಪಾದನೆಯ ಮೂಲಾಂಶ ಇಲ್ಲದಿದ್ದರೆ ಗಾಂಧಿಯನ್ನು ಅರ್ಥಮಾಡಿಕೊಳ್ಳುವುದು ಕಷ್ಟ ಎಂದು ಹೇಳಿದರು.

ಭಾರತವನ್ನು ಒಗ್ಗೂಡಿಸುವ ತಾಕತ್ತು ಗಾಂಧಿಯನ್ನು ಬಿಟ್ಟರೆ ಬೇರೆ ಯಾರಲ್ಲಿಯೂ ಇರಲಿಲ್ಲ. ಗಾಂಧಿ ಒಬ್ಬ ಪಕೀರ, ಮಾಂತ್ರಿಕ ಶಕ್ತಿಯಾಗಿದ್ದರು ಎಂದು ಬಣ್ಣಿಸಿದರು.

ಎಂ.ಹೊನ್ನೂರ್ ಸಾಹೇಬ್ ಮಾತನಾಡಿ ಬ್ರಿಟೀಷರ ವಿರುದ್ದ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ ರಾಷ್ಟ್ರಪಿತ ಮಹಾತ್ಮಗಾಂಧಿಜಿಯವರ ಆದರ್ಶಗಳನ್ನು ಎಲ್ಲರೂ ಜೀವನದಲ್ಲಿ ಪರಿಪಾಲನೆ ಮಾಡಬೇಕೆಂದರು.

ಮನೆಯಂಗಳದಲ್ಲಿ ಸಾಹಿತ್ಯ ಸಂಸ್ಕೃತಿ ವೇದಿಕೆ ಅಧ್ಯಕ್ಷೆ ಚಾಂದಿನಿ ಖಲೀದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಸತ್ಯ ಮತ್ತು ಅಹಿಂಸೆಯಿಂದ ಪರಿವರ್ತನೆ ತಂದಂತೆ ಗಾಂಧಿ ಸರಳ ಸ್ವಭಾವದ ಅದ್ಬುತ ಚೇತನ. ಮೌನದಿಂದಲೆ ಬ್ರಿಟೀಷರನ್ನು ದೇಶದಿಂದ ಓಡಿಸಿ ಸ್ವಾತಂತ್ರ್ಯ ತಂದು ಕೊಟ್ಟರು. ಅ.2 ಗಾಂಧಿ ಜಯಂತಿಯಂದು ಮಾತ್ರ ಗಾಂಧಿಯನ್ನು ನೆನಪು ಮಾಡಿಕೊಂಡರೆ ಸಾಲದು ಪ್ರತಿಯೊಬ್ಬರು ಜೀವನದಲ್ಲಿ ಗಾಂಧಿಯಂತೆ ದೇಶಭಕ್ತಿಯನ್ನು ಮೈಗೂಡಿಸಿಕೊಳ್ಳಬೇಕೆಂದು ತಿಳಿಸಿದರು.

## ಫಾಸ್ಟ್ ನ್ಯೂಸ್

### ಉಪನ್ಯಾಸ ಮಾಲೆ

» **ಚಿತ್ರದುರ್ಗ**

ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾಗಿರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ Mental Health Week ಎಂಬ ಆನ್‌ಲೈನ್ ಉಪನ್ಯಾಸ ಮಾಲೆಯನ್ನು ಇದೇ ಅಕ್ಟೋಬರ್ 16 ರಿಂದ 21 ರವರೆಗೆ (ಸೋಮವಾರ ದಿಂದ ಶನಿವಾರ) ಪ್ರತಿ ದಿನ ಮಧ್ಯಾಹ್ನ 3 ರಿಂದ 4 ಗಂಟೆಯವರೆಗೆ ಆಯೋಜಿಸಲಾಗುತ್ತಿದೆ. ಈ ವೆಬಿನಾರ್‌ನಲ್ಲಿ ನಿಮಾನ್ಸ್ ಸಂಸ್ಥೆಯ ಖ್ಯಾತ ವೈದ್ಯರು ಉಪನ್ಯಾಸಗಳನ್ನು ನೀಡಲಿದ್ದು, ಆಸಕ್ತ ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಜನ ಸಾಮಾನ್ಯರು ಸಹ ಭಾಗಹಿಸಲು ಅವಕಾಶ ಕಲ್ಪಿಸಲಾಗಿದೆ. Registration Link (Cisco's webex) https://tinyurl.com/mentalhealth -talks ಮೂಲಕ ನೋಂದಾಯಿಸಿಕೊಳ್ಳಬಹುದಾಗಿದೆ. ಈ ವೆಬಿನಾರ್ ಸರಣಿಯ ಫ್ಲಯರ್‌ನ್ನು ಲಗತ್ತಿಸಲಾಗಿದ್ದು, ಹೆಚ್ಚಿನ ವಿವರಗಳಿಗೆ ವೈಜ್ಞಾನಿಕಾಧಿಕಾರಿ ಮೊ 9743084194 ಅಥವಾ ಅಕಾಡೆಮಿಯ ವೆಬ್‌ಸೈಟ್ www.kstacademy.inವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಮೇಶ್ ತಿಳಿಸಿದ್ದಾರೆ.

### ರೇಷ್ಮೆ ಕೃಷಿ ಪ್ರಶಸ್ತಿಗಾಗಿ ರೇಷ್ಮೆ ಬೆಳೆಗಾರರಿಂದ ಅರ್ಜಿ

» **ಚಿತ್ರದುರ್ಗ**

ರೇಷ್ಮೆ ಇಲಾಖೆಯಿಂದ 2022–23ನೇ ಸಾಲಿನ ರೇಷ್ಮೆ ಕೃಷಿ ಪ್ರಶಸ್ತಿಗಾಗಿ ಉತ್ತಮ ಪ್ರಗತಿ ಸಾಧಿಸಿರುವ ರೇಷ್ಮೆ ಬೆಳೆಗಾರರಿಂದ ಅರ್ಜಿ ಆಹ್ವಾನಿಸಿದೆ. ಅ.17 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಪ್ರಶಸ್ತಿಗಾಗಿ ರೇಷ್ಮೆ ಬೆಳೆಗಾರರ ಅರ್ಹತೆಗಳು: ಕನಿಷ್ಠ 1 ಎಕರೆ ಹಿಪ್ಪುನೇರಳೆ ತೋಟ ಹಾಗೂ ಪ್ರತ್ಯೇಕ ಹುಳು ಸಾಕಾಣಿಕಾ ಮನೆ ಹೊಂದಿರಬೇಕು. 100 ಮೊಟ್ಟೆಗೆ ಸರಾಸರಿ ರೇಷ್ಮೆ ಗೂಡಿನ ಇಳುವರಿ 65 ಕೆ.ಜಿ ಹಾಗೂ 1 ಎಕರೆಗೆ ರೇಷ್ಮೆ ಗೂಡಿನ ಉತ್ಪಾದನೆ 500 ಕೆ.ಜಿ.ಗಿಂತ ಕಡಿಮೆ ಇರಬಾರದು. ರೇಷ್ಮೆ ಬೆಳೆಗಾರರು ರೇಷ್ಮೆ ಪಾಸ್ ಬುಕ್, ರೇಷ್ಮೆ ಮೊಟ್ಟೆ, ಚಾಕಿ ಖರೀದಿಸಿರು ಬಗ್ಗೆ ಹಾಗೂ ರೇಷ್ಮೆ ಗೂಡು ಮಾರಾಟ ಮಾಡಿರುವ ಬಗ್ಗೆ ದಾಖಲಾತಿಗಳನ್ನು ಹೊಂದಿರಬೇಕು.ಈ ಮೇಲ್ಕಂಡ ಅರ್ಹತೆ ಹೊಂದಿರುವ ರೇಷ್ಮೆ ಬೆಳೆಗಾರರು ಸ್ಥಳೀಯ ರೇಷ್ಮೆ ವಿಸ್ತರಣಾಧಿಕಾರಿಗಳು, ರೇಷ್ಮೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಿ ಅಗತ್ಯ ಮಾಹಿತಿಗಳನ್ನು ದಾಖಲಾತಿಗಳೊಂದಿಗೆ ಒದಗಿಸಿ ಅರ್ಜಿ ಪಡೆಯುವುದು. ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 17ರ ಒಳಗೆ ಅರ್ಜಿಯನ್ನು ಪಡೆದು ಕಚೇರಿಗೆ ಸಲ್ಲಿಸಬೇಕು ಎಂದು ರೇಷ್ಮೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿಗಳಿಗೆ ಫೆಲೋಶಿಪ್ ಅರ್ಜಿ ಅವಧಿ ವಿಸ್ತರಣೆ

» **ಚಿತ್ರದುರ್ಗ**

2023–24ನೇ ಸಾಲಿಗೆ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ಎಂಫಿಲ್ ಮತ್ತು ಪಿಹೆಚ್‌ಡಿಗೆ ನೋಂದಣಿಯಾಗಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಫೆಲೋಶಿಪ್ ನೀಡಲು ಅರ್ಜಿಯನ್ನು ಆನ್‌ಲೈನ್ ಸೇವಾಸಿಂಧು ತಂತ್ರಾಂಶದ ಮೂಲಕ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನು ಅಕ್ಟೋಬರ್ 31 ರವರೆಗೆ ವಿಸ್ತರಿಸಲಾಗಿದೆ.

ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in/sevasindhu/DepartmentServices ಈ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ಎಂಫಿಲ್ ಅಥವಾ ಪಿಹೆಚ್‌ಡಿಗಳಲ್ಲಿ ಯಾವುದಾದರೂ ಒಂದು ಕೋರ್ಸಿಗೆ ಅರ್ಜಿಯನ್ನು ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಪಿ.ವಿ.ನವನೀತ್ ಗೌಡಗೆ ಪಿಹೆಚ್‌ಡಿ ಪದವಿ

» **ಚಿತ್ರದುರ್ಗ**



ಹಿರಿಯೂರು ತಾಲ್ಲೂಕಿನ ಧರ್ಮಪುರ ಸಮೀಪದ ಅರಳೀಕೆರೆ ಗ್ರಾಮದ ನಿವಾಸಿ ಪಿ.ವಿ.ನವನೀತ್ ಗೌಡ ಅವರು ಕುವೆಂಪು ವಿಶ್ವವಿದ್ಯಾನಿಲಯುದಿಂದ ಪಿಹೆಚ್.ಡಿ ಪದವಿ ಪಡೆದಿದ್ದಾರೆ. ಕುವೆಂಪು ವಿಶ್ವವಿದ್ಯಾನಿಲಯುದ ರಸಾಯನಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಯಾದವ್ ಡಿ.ಬೋಡ್ಕೆ ಅವರ ಮಾರ್ಗದರ್ಶನದಲ್ಲಿ ಸಲ್ಲಿಸಿದ SYNTHESIS CHARACTERIZATION AND BIOLOGICAL STUDIES OF SOME NITROGEN HETEROCYCLES ಮಹಾಪ್ರಬಂಧಕ್ಕೆ ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾನಿಲಯ ಪಿಹೆಚ್.ಡಿ ಪದವಿ ನೀಡಿದೆ.

---

**ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ**

# ಬಗರ್ ಹುಕುಂ ಯೋಜನೆಯ 41580 ಅರ್ಜಿಗಳನ್ನು ವರ್ಷದೊಳಗೆ ವಿಲೇವಾರಿ ಮಾಡಿ: ಕೃಷ್ಣ ಭೈರೇಗೌಡ





» **ಚಿತ್ರದುರ್ಗ**

ಅಕ್ರಮ ಸಕ್ರಮ ಬಗರ್ ಹುಕುಂ ಯೋಜನೆಯಡಿ ಜಿಲ್ಲೆಯಲ್ಲಿ ಸಲ್ಲಿಕೆಯಾಗಿರುವ 41580 ಅರ್ಜಿಗಳನ್ನು ಒಂದು ವರ್ಷದೊಳಗೆ ವಿಲೇವಾರಿ ಮಾಡಿ, ಅರ್ಹ ರೈತರಿಗೆ ಸಾಗುವಳಿ ಚೀಟಿ ನೀಡಬೇಕು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಕ್ರಮ ಸಕ್ರಮ ಬಗರ್ ಹುಕುಂ ಯೋಜನೆಯಡಿ ಸಾಗುವಳಿ ಚೀಟಿ ನೀಡುವಂತೆ ಚಿತ್ರದುರ್ಗದಲ್ಲಿ ಸುಮಾರು 41,580 ಅರ್ಜಿಗಳು ಸಲ್ಲಿಕೆಯಾಗಿದೆ. ಈ ಅರ್ಜಿಗಳನ್ನು ಮುಂದಿನ ಒಂದು ವರ್ಷದಲ್ಲಿ ವಿಲೇವಾರಿಗೊಳಿಸಬೇಕು. ಅರ್ಜಿ ಸಲ್ಲಿಸಿದವರಲ್ಲಿ, ಸಾಗುವಳಿಯೇ ಮಾಡಿದವರು ಕೂಡ ಇರುವ ಸಾಧ್ಯತೆಗಳಿದ್ದು, ಪರಿಶೀಲನೆ ನಡೆಸಬೇಕು, ಸಮಗ್ರವಾಗಿ ಪರಿಶೀಲಿಸಿ, ಅರ್ಹರಿಗೆ ಸಾಗುವಳಿ ಚೀಟಿ ನೀಡಬೇಕು. ನಮೂನೆ 50, 53, 57ಕ್ಕೆ ಸಂಬಂಧಿಸಿದಂತೆ ಅಕ್ರಮ–ಸಕ್ರಮಗೊಳಿಸಿ ಸಾಗುವಳಿ ಚೀಟಿ ನೀಡಲು ಕೋರಿ ಸಾವಿರಾರು ಜನ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಈ ಅರ್ಜಿಗಳು ವಿಲೇವಾರಿಯಾಗದ ಕಾರಣ ರೈತರು ದಿನಂಪ್ರತಿ ಸರ್ಕಾರಿ ಕಚೇರಿಗಳಿಗೆ ಅಲೆಯುವಂತಾಗಿದೆ. ಜನರನ್ನು ಹೀಗೆ ಅಲೆಸುವುದು ಸರಿಯಲ್ಲ. ಜನ ಭರವಸೆ ಇಟ್ಟು ಬದಲಾವಣೆ ನಿರೀಕ್ಷೆಯಿಂದ ಹೊಸ ಸರ್ಕಾರ ತಂದಿದ್ದಾರೆ. ಸುಧಾರಣೆ ಕಾರ್ಯರೂಪಕ್ಕೆ ಬರದಿದ್ದರೆ ಪ್ರಜಾಪ್ರಭುತ್ವದ ಆಶಯವೇ ವ್ಯರ್ಥ. ಹೀಗಾಗಿ ಸರ್ಕಾರವೂ ಬಡ ಜನರ ಪರ ಕೆಲಸ ಮಾಡಲು ಬದ್ಧವಾಗಿದೆ.

ಆದರೆ, ಸರ್ಕಾರದ ಧ್ಯೇಯೋದ್ದೇಶ ಈಡೇರಲು ಅಧಿಕಾರಿಗಳ ಸಹಕಾರ ಮುಖ್ಯ. ಹೀಗಾಗಿ ಮುಂದಿನ ಒಂದು ವರ್ಷದಲ್ಲಿ ಬಗರ್ ಹುಕುಂ ಅರ್ಜಿಗಳನ್ನು ವಿಲೇಗೊಳಿಸಿ. ಅರ್ಹರಿಗೆ ಸಾಗುವಳಿ ಚೀಟಿ ನೀಡಬೇಕು. ಅಧಿಕಾರಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ "ಬಗರ್ ಹುಕುಂ ಆ್ಯಪ್" ಅಭಿವೃದ್ಧಿಪಡಿಸುತ್ತಿದ್ದು ಇದರ ಸಹಾಯದಿಂದ ಸ್ಯಾಟಲೈಟ್ ಇಮೇಜ್ ಪಡೆದು ನೈಜ ಸಾಗುವಳಿದಾರರನ್ನು ಗುರುತಿಸಬಹುದು. ಅಲ್ಲದೆ, ಇ–ಸಾಗುವಳಿ ಚೀಟಿಯನ್ನೂ ನೀಡಬಹುದು" ಎಂದರು.

ಸರ್ಕಾರಿ ಆಸ್ತಿಗಳ ರಕ್ಷಣೆಗೆ ಕ್ರಮ: ರಾಜ್ಯದಲ್ಲಿನ ಸರ್ಕಾರಿ ಆಸ್ತಿಗಳ ರಕ್ಷಣೆಗೆ ಕ್ರಮವಹಿಸಲಾಗಿದ್ದು, ಸರ್ಕಾರಿ ಆಸ್ತಿ ದಾಖಲೆನಗಳನ್ನು ನಮೂದಿಸಲು ಆಪ್ ಅಭಿವೃದ್ಧಿ ಪಡಿಸಿ ಈಗಾಗಲೇ ಬಿಡುಗಡೆ ಮಾಡಲಾಗಿದೆ. ಮೂಲ ನೋಂದಣಿ ಸಂಖ್ಯೆ ಆಧರಿಸಿ, ಸರ್ಕಾರಿ ಆಸ್ತಿಗಳ ನೊಂದಣಿ ಆಸ್ತಿ ಮಾಡಲಾಗುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ 2023ರ ಸೆಪ್ಟೆಂಬರ್ ಆರಂಭದಲ್ಲಿ 4447 ಸರ್ಕಾರಿ ಆಸ್ತಿಗಳ ಫ್ಲಾಗಿಂಗ್ ಮಾಡಲಾಗಿದೆ.ಸೆಪ್ಟೆಂಬರ್‌ನಿಂದ ಅಕ್ಟೋಬರ್ ಆರಂಭದವರೆಗೆ ಜಿಲ್ಲೆಯಲ್ಲಿ 3326 ಸರ್ಕಾರಿ ಆಸ್ತಿಗಳ ಫ್ಲಾಗಿಂಗ್ ಮಾಡಲಾಗಿದೆ. ಈ ಆಸಿಗಳನ್ನು ಒತ್ತುವರಿಯಾಗದಂತೆ ತಡೆಯಲು ಮೂರು ತಿಂಗಳಿಗೊಮ್ಮೆ ಆಸ್ತಿಗಳ ಜಾಗಕ್ಕೆ ಗ್ರಾಮ ಲೆಕ್ಕಾಧಿಕಾರಿಗಳು ಖುದ್ದು ಭೇಟಿ ನೀಡಿ, ಒತ್ತುವರಿಯಾಗದಿರುವುದನ್ನು ದೃಢೀಕರಿಸಿಕೊಂಡು ಜಿಪಿಎಸ್ ಮೂಲಕ ಪ್ರಾಮಾಣೀಕರಿಸಬೇಕು ಎಂದು ತಿಳಿಸಿದರು.

ಶೀಘ್ರ ಬೆಳೆ ಸಮೀಕ್ಷೆ ನಡೆಸಿ, ಫ್ರೂಟ್ಸ್ ತಂತ್ರಾಂಶದಲ್ಲಿ ನಮೂದಿಸಿ: ಜಿಲ್ಲೆಯ ಆರು ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಹೀಗಾಗಿ ಅಧಿಕಾರಿಗಳು ಮುಂದಿನ ಒಂದು ವಾರದಲ್ಲಿ ಬೆಳೆ ಸಮೀಕ್ಷೆ ನಡೆಸಿ ಸಂಪೂರ್ಣ ಮಾಹಿತಿಯನ್ನು "ಫ್ರೂಟ್ಸ್ ತಂತ್ರಾಂಶ"ದಲ್ಲಿ ನಮೂದಿಸಿದರೆ ಮಾತ್ರ ರೈತರಿಗೆ ಬೆಳೆ ನಷ್ಟ ತುಂಬಿಕೊಡಲು ಸಾಧ್ಯ. ಆ ನಿಟ್ಟಿನಲ್ಲಿ ಅಧಿಕಾರಿಗಳು ಶೀಘ್ರದಲ್ಲಿ ಬೆಳೆ ಸಮೀಕ್ಷೆ ನಡೆಸಿದ ಅಂಕಿ ಅಂಶಗಳನ್ನು ತಂತ್ರಾಂಶದಲ್ಲಿ ನಮೂದಿಸಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸೂಚಿಸಿದರು.

"ರಾಜ್ಯದ 195 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಪರಿಹಾರಕ್ಕಾಗಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದು, ಕೇಂದ್ರ ಅಧ್ಯಯನ ತಂಡವೂ ರಾಜ್ಯಕ್ಕೆ ಆಗಮಿಸಿ ಪರಿಶೀಲನೆ ನಡೆಸಿದೆ.

ಆದರೆ, ತಹಶೀಲ್ದಾರ್, ಗ್ರಾಮ ಲೆಕ್ಕಿಗರು ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಪ್ರತಿ ರೈತನ ಬೆಳೆ ಸಮೀಕ್ಷೆ ನಡೆಸಿ ಫ್ರೂಟ್ಸ್ ತಂತ್ರಾಂಶದಲ್ಲಿ ದಾಖಲಿಸಬೇಕು. ಆಗ ಮಾತ್ರ ರೈತರಿಗೆ ನ್ಯಾಯಯುತ ಬೆಳೆ ನಷ್ಟ ಪರಿಹಾರ ನೀಡುವುದು ಸಾಧ್ಯ. ಹೀಗಾಗಿ ಅಧಿಕಾರಿಗಳು ತ್ವರಿತಗತಿಯಲ್ಲಿ ಬೆಳೆ ಸಮೀಕ್ಷೆ ನಡೆಸಬೇಕು" ಎಂದು ತಿಳಿಸಿದರು.

ಅಲ್ಲದೆ, "ಬೆಳೆ ನಷ್ಟಕ್ಕೆ ರೈತರಿಗೆ 5 ಎಕರೆವರೆಗೆ ಪರಿಹಾರ ಸಿಗಲಿದೆ. ಒಮ್ಮೆ ಬೆಳೆ ಸಮೀಕ್ಷೆ ಮುಗಿಸಿದ ನಂತರ ಬಿಟ್ಟುಹೋದ ರೈತರ ಹೆಸರನ್ನು ಮತ್ತೆ ಪರಿಹಾರದ ಪಟ್ಟಿಗೆ ಸೇರಿಸುವುದು ಅಸಾಧ್ಯ. ಅಲ್ಲದೆ, ನಗದಿನ ಮೂಲಕವೂ ಪರಿಹಾರ ನೀಡಿಕೆಗೆ ಅವಕಾಶ ಇಲ್ಲ.

ಪರಿಹಾರದ ಹಣ ಬ್ಯಾಂಕ್ ಖಾತೆಗೆ ಸಂದಾಯವಾಗಲಿ.ಹೀಗಾಗಿಅಧಿಕಾರಿಗಳು ಈಗಲೇ ಬೆಳೆ ಸಮೀಕ್ಷೆಯನ್ನು ಶೇ.100ರಷ್ಟು ದಕ್ಷತೆಯಿಂದ ಮುಗಿಸಬೇಕು. ಬೆಳೆ ಸಮೀಕ್ಷೆಯಿಂದ ಮಾತ್ರ ರೈತರಿಗೆ ಪರಿಹಾರ ನೀಡಲು ಸಾಧ್ಯ" ಎಂದು ಸಚಿವರು ತಾಕೀತು ಮಾಡಿದರು.

ಡಿಸೆಂಬರ್ ಅಂತ್ಯದೊಳಗೆ 263 ಕಂದಾಯ ಗ್ರಾಮ ಘೋಷಣೆ: ಕಂದಾಯ ಇಲಾಖೆಗೆ ಸೇರದ ಕಾರಣ ಕಂದಾಯೇತರ ಜನವಸತಿ ನಿವಾಸಿಗಳು ಅಭಿವೃದ್ಧಿ ಯೋಜನೆಗಳಿಂದ ವಂಚಿತರಾಗುತ್ತಿದ್ದರು, ಹೀಗಾಗಿ ಕರ್ನಾಟಕ ಭೂ ಕಂದಾಯ ಕಾಯಿದೆಗೆ ತಿದ್ದುಪಡಿ ತಂದು ತಾಂಡ–ಗೊಲ್ಲರಹಟ್ಟಿ ಸೇರಿದಂತೆ ಪ್ರದೇಶಗಳನ್ನು ಕಂದಾಯ ಗ್ರಾಮ ಎಂದು ಘೋಷಿಸಲು ಅನುವುಮಾಡಿಕೊಡಲಾಗಿತ್ತು.

ಚಿತ್ರದುರ್ಗದಲ್ಲೂ 263 ಕಂದಾಯೇತರ ಜನವಸತಿ ಪ್ರದೇಶಗಳ ಪೈಕಿ 151 ಪ್ರದೇಶಗಳನ್ನು ಕಂದಾಯ ಗ್ರಾಮಗಳು ಎಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ.

ಆದರೆ ಉಳಿದ ಗ್ರಾಮಗಳಿಗೆ ಏಕೆ ಅಧಿಸೂಚನೆ ಹೊರಡಿಸಿಲ್ಲ? ಹಲವು ಕಡೆಗಳಲ್ಲಿ ಕಂದಾಯ ಗ್ರಾಮವೇ ಘೋಷಿಸದೆ ಹೇಗೆ ಹಕ್ಕು ಪತ್ರ ನೀಡಿದಿರಿ? ಎಂದು ಪ್ರಶ್ನಿಸಿದ ಸಚಿವರು, ಶೀಘ್ರದಲ್ಲೇ ಅರ್ಹ ಕಂದಾಯೇತರ ಜನವಸತಿ ಪ್ರದೇಶಗಳನ್ನು ಗುರುತಿಸಿ ಕಂದಾಯ ಗ್ರಾಮ ಎಂದು ಅಧಿಸೂಚನೆ ಹೊರಡಿಸಿ. ಬಡವರಿಗೆ ಆದಷ್ಟು ಶೀಘ್ರದಲ್ಲಿ ಹಕ್ಕುಪತ್ರ ವಿತರಿಸಿ" ಎಂದು ಸೂಚಿಸಿದರು.

ತಕರಾರು ಅರ್ಜಿ ತ್ವರಿತ ವಿಲೇಗೆ ಸೂಚನೆ: ಜಿಲ್ಲೆಯಾದ್ಯಂತ ತಹಶೀಲ್ದಾರ್ ಹಾಗೂ ಉಪವಿಭಾಗಾಧಿಕಾರಿ, ಜಿಲ್ಲಾಧಿಕಾರಿಗಾಳ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ತಕರಾರು ಪ್ರಕರಣಗಳ ಬಗ್ಗೆಯೂ ಸಭೆಯಲ್ಲಿ ಚರ್ಚಿಸಿದ ಸಚಿವ ಕೃಷ್ಣ ಬೈರೇಗೌಡ ಅವರು, "ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ಬಾಕಿ ಇರುವ ಅರ್ಜಿಗಳನ್ನು ಅಧಿಕಾರಿಗಳು ತ್ವರಿತವಾಗಿ ವಿಲೇವಾರಿ ಮಾಡಿರುವುದು ನಿಜಕ್ಕೂ ಶ್ಲಾಘನೀಯ" ಎಂದು ಮೆಚ್ಚುಗೆ ಸೂಚಿಸಿದರು. ಆದರೆ, ಉಪವಿಭಾಗಾಧಿಕಾರಿನ್ಯಾಯಾಲಯಗಳಲ್ಲಿ 1497 ಪ್ರಕರಣಗಳು ಬಾಕಿ ಇರುವುದು ಏಕೆ? ಎಂದು ಪ್ರಶ್ನಿಸಿದರು. ಅಲ್ಲದೆ, ಬಾಕಿ ಇರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ದೂರುದಾರರಿಗೆ ನೋಟೀಸ್ ನೀಡಿ ತ್ವರಿತ ವಿಚಾರಣೆ ನಡೆಸಿ ಆದಷ್ಟು ಶೀಘ್ರದಲ್ಲಿ ಈ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಎಂದು ಅವರು ತಿಳಿಸಿದರು.

ಸರ್ಕಾರಿ ಕಚೇರಿಗಳಿಗೆ ದಿಢೀರ್ ಭೇಟಿ ಆಡಳಿತಕ್ಕೆ ಚುರುಕು: ಚಿತ್ರದುರ್ಗ ಕಂದಾಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಳ್ಳುವ ಮುನ್ನ ಸಚಿವ ಕೃಷ್ಣ ಬೈರೇಗೌಡ ಅವರು ಕಂದಾಯ ಇಲಾಖೆ ವಿವಿಧ ಕಚೇರಿಗಳಿಗೆ ಭೇಟಿ ನೀಡಿ ಆಡಳಿತಕ್ಕೆ ಚುರುಕು ನೀಡಿದರು.

ಮಾಡದಕೆರೆ ನಾಡಕಚೇರಿಗೆ ಭೇಟಿ ನೀಡಿದ ಸಚಿವರು ಅಧಿಕಾರಿಗಳಿಂದ ಹಲವು ಮಾಹಿತಿಗಳನ್ನು ಪಡೆದರು. ಅಲ್ಲದೆ, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ನಂತರ ಹೊಸದುರ್ಗ ತಾಲೂಕು ಕಚೇರಿಗೆ ತೆರಳಿದ ಅವರು, ರೆಕಾರ್ಡ್ ರೂಂ ಪರಿಶೀಲನೆ ವೇಳೆ 100 ವರ್ಷದ ಹಳೆಯ ಕಡತಗಳು ದೂಳು ಹಿಡಿದಿರುವುದಕ್ಕೆಅಧಿಕಾರಿಗಳನ್ನುತರಾಟೆಗೆ ತೆಗೆದುಕೊಂಡರು. ಅಲ್ಲದೆ, ಶೀಘ್ರದಲ್ಲೇ ಎಲ್ಲಾ ಕಡತಗಳನ್ನೂ ಸ್ಕ್ಯಾನ್ ಮಾಡಿ ಡಿಜಿಟಲೀಕರಣಗೊಳಿಸುವ ಮೂಲಕ ಸಾರ್ವಜನಿಕರಿಗೆ ಈ ದಾಖಲೆಗಳು ಲಭ್ಯವಾಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಸಚಿವರು ಹೊಸದುರ್ಗದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಮಿನಿ ವಿಧಾನಸೌಧ ಕಟ್ಟಡಕ್ಕೂ ಭೇಟಿ ನೀಡಿ ಪರಿಶೀಲಿಸಿದರು.

ಇ–ಆಫೀಸ್ ಬಳಸಿ: ಸಭೆಯ ವೇಳೆ ಈ ಆಫೀಸ್ ಬಳಕೆಯ ಬಗ್ಗೆಯೂ ಚರ್ಚೆ ನಡೆಸಿದ ಸಚಿವರು, "ಪ್ರಗತಿ ಪರಿಶೀಲನಾ ಪುಸ್ತಕದಲ್ಲಿ ಎಲ್ಲಾ ತಾಲೂಕುಗಳಲ್ಲೂ ಇ–ಆಫೀಸ್ ಜಾರಿಯಾಗಿದೆ ಎಂದು ನಮೂದಿಸಲಾಗಿದೆ. ಆದರೆ, ವಾಸ್ತವದಲ್ಲಿ ಯಾವ ತಾಲೂಕಿನಲ್ಲೂ ಅಧಿಕಾರಿಗಳು ಇ–ಆಫೀಸ್ ಬಳಸುತ್ತಿಲ್ಲ ಎಂಬುದು ಖುದ್ದು ಪರಿಶೀಲನೆಯಿಂದ ತಿಳಿಯುತ್ತದೆ.

ಟಪಾಲು ವಿಭಾಗದಲ್ಲೇ ಇ–ಆಫೀಸ್ ಬಳಸಿದರೆ ಯಾವ ಕಡತವೂ ಕಳುವಾಗಲ್ಲ. ಅಲ್ಲದೆ, ಎಲ್ಲರಿಗೂ ತ್ವರಿತವಾಗಿ ನ್ಯಾಯಸಮ್ಮತ ಪರಿಹಾರವೂ ಲಭ್ಯವಾಗುತ್ತದೆ. ಸರ್ಕಾರ ಪ್ರಚಾರಕ್ಕಾಗಿ ಇ–ಆಫೀಸ್ ಜಾರಿಗೆ ತಂದಿಲ್ಲ.

ಬದಲಾಗಿ ಜನರ ಕೆಲಸ ಆಗಲಿ ಎಂಬ ಕಾರಣಕ್ಕೆ ಜಾರಿಗೆ ತರಲಾಗಿದೆ. ಹೀಗಾಗಿ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ಇ–ಆಫೀಸ್‌ಬಳಸಬೇಕು.ಜಿಲ್ಲಾಧಿಕಾರಿಗಳು ಈ ಬಗ್ಗೆ ಪರಿಶೀಲನೆ ನಡೆಸಬೇಕು" ಎಂದು ತಾಕೀತು ಮಾಡಿದರು.

ಬರ ಪರಿಸ್ಥಿತಿ ಘೋಷಣೆಯಾಗಿರುವುದರಿಂದ ಜಾನುವಾರುಗಳಿಗೆ ಮೇವಿನ ಕೊರತೆ ಆಗದಂತೆ ಮೇವು ಸಂಗ್ರಹಣೆಗಾಗಿ ಕೂಡಲೇ ಸಿದ್ದತೆ ಮಾಡಿಕೊಳ್ಳಬೇಕು .ಪಶು ಸಂಗೋಪನೆ ಇಲಾಖೆಯಿಂದ ಮೇವು ಬೀಜಗಳವಿತರಣೆಗೆಕ್ರಮಕೈಗೊಳ್ಳಲಾಗಿದ್ದು, ಜಿಲ್ಲೆಯಲ್ಲಿ ನೀರಾವರಿ ಸೌಲಭ್ಯವಿರುವ ಹಾಗೂ ಮೇವು ಬೆಳೆಯಲು ಆಸಕ್ತ ಇರುವ ರೈತರನ್ನು ಗುರುತಿಸಿ, ಮೇವು ಬೀಜಗಳ ವಿತರಣೆಗೆ ಕ್ರಮಕೈಗೊಳ್ಳಬೇಕು. ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೊರದಂತೆ ಮುಂಜಾಗ್ರತೆ ಕ್ರಮವಾಗಿ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿ ಪಟ್ಟಿ ಮಾಡಿ. ಈಗಾಗಲೇ ಎಲ್ಲಾ ಜಿಲ್ಲೆಗಳಿಗೆ ಕುಡಿಯುವ ನೀರು ಉದ್ದೇಶಕ್ಕಾಗಿಯೇ ತಲಾ ರೂ.1 ಕೋಟಿ ಒದಗಿಸಲಾಗಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಮಾತನಾಡಿ, ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವರು ಸೂಚಿಸಿರುವ ವಿಷಯಗಳನ್ನು ಕೆಡಿಪಿ ಸಭೆಗಳಲ್ಲಿ ಪ್ರಗತಿ ಪರಿಶೀಲನೆ ಮಾಡಲಾಗುವುದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಡಾ.ಎಂ.ಚಂದ್ರಪ್ಪ, ಟಿ.ರಘುಮೂರ್ತಿ, ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಕಂದಾಯ ಇಲಾಖೆ ಆಯುಕ್ತ ಸುನೀಲ್ ಕುಮಾರ್, ಸರ್ವೆ ಇಲಾಖೆ ಆಯುಕ್ತ ಮಂಜುನಾಥ್ ಹಾಗೂ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಕರ್ನಾಟಕ ಲ್ಯಾಂಡ್ ಕಾರ್ಪೋರೇಷನ್ ವ್ಯವಸ್ಥಾಪಕ ನಿರ್ದೇಶಕ ವಸಂತ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಇದ್ದರು.

## ಪಿಟಿಸಿಎಲ್ ಕಾಯ್ದೆ ಎಚ್ಚರಿಕೆ ಇರಲಿ

ಬಹುನಿರೀಕ್ಷಿತ ಪಿಟಿಸಿಎಲ್ ಕಾಯ್ದೆಗೆ ಸಂಬಂಧಿಸಿದಂತೆ ಸರ್ಕಾರ ತಿದ್ದುಪಡಿ ವಿಧೇಯಕ ಮಂಡಿಸಿ ಅಂಗೀಕಾರ ಪಡೆದಿದೆ. ಹೀಗಾಗಿ ಪಿಟಿಸಿಎಲ್ ಕಾಯ್ದೆಯ ಅಡಿಯಲ್ಲಿ ಮಂಜೂರಾದ ಭೂಮಿಯನ್ನು ಸರ್ಕಾರದ ಅನುಮತಿ ಇಲ್ಲದೆ ಮಾರಾಟ ಮಾಡುವಂತಿಲ್ಲ. ಇದರ ಬಗ್ಗೆ ಮಾಹಿತಿ ಇಲ್ಲದ ಕೆಲವು ಅಮಾಯಕರು ಭೂ ಮಾರಾಟಕ್ಕೆ ಮುಂದಾಗಬಹುದು. ಅಥವಾ ಪಿಟಿಸಿಎಲ್ ಭೂಮಿಯನ್ನು ಖರೀದಿ ಮಾಡುವವರೂ ಸಹ ಮೋಸಕ್ಕೊಳಗಾಗುವ ಸಾಧ್ಯತೆ ಇದೆ. ಹೀಗಾಗಿ ಇಂತಹ ಪ್ರಕರಣದ ಬಗ್ಗೆ ಅಧಿಕಾರಿಗಳು ಎಚ್ಚರಿಕೆವಹಿಸಬೇಕು ಎಂದು ಸಚಿವರು ತಾಕೀತು ಮಾಡಿದರು.

## ನ್ಯಾಯಾಲಯ ಪ್ರಕರಣಗಳ ಅಸಡ್ಡೆ ಬೇಡ

ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಹೈಕೋರ್ಟ್ ನಲ್ಲಿ 20,000 ಪ್ರಕರಣಗಳಿವೆ. ಆದರೆ, ಈ ಪೈಕಿ 15,000 ಪ್ರಕರಣಗಳಲ್ಲಿ ತೆಗೆದುಕೊಂಡಿರು ಕ್ರಮ ಶೂನ್ಯ. ಅಲ್ಲದೆ, ನ್ಯಾಯಾಲಯದಲ್ಲಿ ವಕಾಲತ್ತನ್ನೂ ಸಹ ಸಲ್ಲಿಸುವ ಕೆಲಸವನ್ನು ನಮ್ಮ ಅಧಿಕಾರಿಗಳು ಮಾಡಿಲ್ಲ. ಹೀಗಾಗಿ ನ್ಯಾಯಾಲಯ ಇಲಾಖೆಯನ್ನು ತರಾಟೆಗೆ ತೆಗೆದುಕೊಳ್ಳುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅಸಮಾಧಾನ ಹೊರಹಾಕಿದರು.ಈ ಬಗ್ಗೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಸಚಿವರು, "ಚಿತ್ರದುರ್ಗದಲ್ಲೂ ಸಹ ಹೈಕೋರ್ಟ್‌ನಲ್ಲಿರುವ 359 ಪ್ರಕರಣಗಳ ಪೈಕಿ 302 ಪ್ರಕರಣಗಳಲ್ಲಿ ತಹಶೀಲ್ದಾರರು ಹಾಗೂ ಉಪವಿಭಾಗಾಧಿಕಾರಿ ತೆಗೆದುಕೊಂಡಿರುವ ಕ್ರಮ ಶೂನ್ಯವಾಗಿರುವುದು ಏಕೆ? ಈ ಪ್ರಕರಣಗಳಲ್ಲಿ ಏಕಿನ್ನು ವಕಾಲತ್ತನ್ನೂ ಸಲ್ಲಿಸಿಲ್ಲ? ಎಂದು ಪ್ರಶ್ನಿಸಿದರು.

ನೀವು ಮಾಡುವ ಕೆಲಸಕ್ಕೆ ಸರ್ಕಾರದ ಜಮೀನು ಖಾಸಗಿಯವರ ಪಾಲಾಗಲು ನಾವು ಸಹಿ ಹಾಕಬೇಕಾ ಎಂದ ಸಚಿವರು, ಈ ಸಮಸ್ಯೆಯನ್ನು ಶೀಘ್ರ ಪರಿಹರಿಸಿ ಪ್ರತಿ 15 ದಿನಗಳಿಗೊಮ್ಮೆ ಜಿಲ್ಲಾಧಿಕಾರಿಗಳಿಗೆ ವರದಿ ನೀಡುವಂತೆ ಸೂಚಿಸಿದರು.

---

**ಪ್ರಮುಖ ಸುದ್ದಿ**

**ಪ್ರತಿ ತಿಂಗಳು 18 ಲಕ್ಷ ವಸೂಲಾತಿ ಗುರಿ ನಿಗಧಿ ಪಡಿಸಿ ಕಟ್ಟು ನಿಟ್ಟಾಗಿ ತೆರಿಗೆ ಸಂಗ್ರಹಿಸಲು ಸೂಚನೆ**

# ಆಸ್ತಿ ತೆರಿಗೆ, ನೀರಿನ ಕಂದಾಯ ವಸೂಲಾತಿ ಅಂದೋಲನ



» **ಹೊಸದುರ್ಗ**

ಪಟ್ಟಣದ ಪುರಸಭೆಯ ಕಂದಾಯ ಶಾಖೆಯಿಂದ 3 ತಂಡಗಳನ್ನು ರಚಿಸಿ ಶನಿವಾರ ಮನೆ–ಮನೆಗೆ ಬೇಟಿ ನೀಡಿ ತೆರಿಗೆ ಬಾಕಿ ಇರುವುದನ್ನು ಪರಿಶೀಲಿಸಲಾಗುತ್ತಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದರು.

ತೆರಿಗೆ ಪಾವತಿಸುವ ಸಲುವಾಗಿ ಕೋಟೆ ಭಾಗದಲ್ಲಿ ನಿಯೋಜನೆಗೊಂಡ ಕರವಸೂಲಿಗಾರ ವಿನಯ್ ತಂಡದ ಕಾರ್ಯ ವೈಕರಿಯನ್ನು ಪರಿಶೀಲಿಸಿದ ಅವರು ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಪಟ್ಟಣದಲ್ಲಿ ಸುಮಾರು 28370 ಜನ ವಾಸವಾಗಿದ್ದು, ಸುಮಾರು 7100 ಕ್ಕು ಅಧಿಕ ಕಟ್ಟಡಗಳನು ಹೊಂದಿದ್ದು ಖಾಲಿ ನಿವೇಶನಗಳನ್ನು ಒಳಗೊಂಡಂತೆ 13000 ಆಸ್ತಿಗಳ ದಾಖಲೆಯನ್ನು ಪುರಸಭೆಯಲ್ಲಿ ಹೊಂದಿದ್ದು ಪ್ರತಿ ವರ್ಷ 1.8 ಕೋಟಿಗಳ ಆಸ್ತಿ ತೆರಿಗೆ ಬೇಡಿಕೆ ಇದ್ದು. ಬೆಂಗಳೂರು ಪೌರಾಡಳಿತ ನಿರ್ದೇಶನಾಲಯ ನಿರ್ದೇಶಕರು ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಚಿತ್ರದುರ್ಗ ಅವರು ವಿಡಿಯೋ ಸಂವಾದದಲ್ಲಿ ಪ್ರತಿ ಮಾಹೆ 18 ಲಕ್ಷ ವಸೂಲಾತಿ ಗುರಿ ನಿಗಧಿ ಪಡಿಸಿ ಕಟ್ಟು ನಿಟ್ಟಾಗಿ ತೆರಿಗೆ ಸಂಗ್ರಹಿಸಲು ಕಟ್ಟು ನಿಟ್ಟಾಗಿ ಸೂಚಿಸಿದ್ದಾರೆ ಎಂಬ ಮಾಹಿತಿ ನೀಡಿದ ಅವರು ಪಟ್ಟಣದ ಸರ್ವೋತ್ತಮ ಮುಖ ಅಭಿವೃದ್ದಿಗೆ ಸಾರ್ವಜನಿಕರು ಪುರಸಭಾ ಸದಸ್ಯರ ಸಹಕಾರ ಪಡೆದು ನಿಗಧಿತ ಅವಧಿಯೊಳಗೆ ತೆರಿಗೆ ಪಾವತಿಸಲು ಸಾರ್ವಜನಿಕರಲ್ಲಿ ಮಾನವಿ ಮಾಡಿದರು.

ಕಂದಾಯ ನಿರೀಕ್ಷಕ ಜಿ.ಎನ್. ಕುಮಾರ್ ಮಾತನಾಡಿ ಆಸ್ತಿ ತೆರಿಗೆ, ನೀರಿನ ಕಂದಾಯ ಹಾಗೂ ಉದ್ದಿಮೆ ಪರವಾನಿಗೆ ಶುಲ್ಕವನ್ನು ನಿಗಧಿತ ಅವಧಿಯೊಳಗೆ ಪಾವತಿಸುವುದು ಹಾಗೂ ವಿಳಂಭವಾದಲ್ಲಿ ಶೇ.2.% ರಷ್ಟು ಬಡ್ಡಿಯ ರೂಪದಲ್ಲಿ ಪಾವತಿಸುವುದು ಕಡ್ಡಾಯವಾಗಿದ್ದು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಭಾರತ್ ಪೇ, ಫೋನ್‌ಪೇ,ಗೂಗಲ್‌ಪೇಮತ್ತುಪೇಟಿಎಂ ಮೂಲಕ ಹಣ ಸಂದಾಯ ಮಾಡಲು ಸರ್ಕಾರ ಅವಕಾಶ ನೀಡಲಾಗಿದ್ದು ಬಾಕಿ ಉಳಿಸಿಕೊಂಡಿರುವ ಕಟ್ಟಡದ ಮಾಲೀಕರು, ಹಾಗೂ ಉದ್ದಿಮೆದಾರರು ಎಸ್.ಡಬ್ಲ್ಯೂ.ಎಂ ಉಪಯುಕ್ತ ಶುಲ್ಕ ಸೇರಿಕೊಂಡು ಪಾವತಿಸುವುದು ಹಾಗೂ ಪುರಸಭೆಯಿಂದ ಕರವಸೂಲಿಗಾರು ಹಾಗೂ ಸಿಬ್ಬಂದಿಗಳ ತಂಡ ಬೇಟಿ ನೀಡಿ ತಿಳುವಳಿಕೆ ನೀಡಲಾಗುತ್ತಿದ್ದು ಎಲ್ಲಾ ಸಾರ್ವಜನಿಕರು ಸಹಕರಿಸುವಂತೆ ತಿಳಿಸಿದ್ದು ಅತಿ ಹೆಚ್ಚು ಬಾಕಿ ಉಳಿಸಿಕೊಂಡ ಮಾಲೀಕರಿಗೆ ದಂಡ ವಸೂಲಿ ಜೊತೆ ಕಾನೂನು ಕ್ರಮ ಜರುಗಿಸಲಾಗುವುದು ಎಂಬ ಎಚ್ಚರಿಕೆಯನ್ನ ನೀಡಿದರು.

ಈ ಸಂದರ್ಭದಲ್ಲಿ ಕರವಸೂಲಿಗಾರ ವಿನಯ್, ನೇಮಿಕಾಂತ್, ಹಾಗೂ ಪುರಸಭಾ ಸಿಬ್ಬಂದಿ, ನೀರುಸರಬರಾಜು ಸಹಾಯಕರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T